**ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ**
ಶ್ರೀ ಚಾಮರಾಜೇಂದ್ರ ಸಂಸ್ಕೃತ ಮಹಾವಿದ್ಯಾಲಯ ಆವರಣ
ಪಂಪಮಹಾಕವಿ ರಸ್ತೆ, ಚಾಮರಾಜಪೇಟೆ, ಬೆಂಗಳೂರು – 560018.

**कर्नाटक-संस्कृत-विश्वविद्यालय:**
श्री चामराजेन्द्र संस्कृत महाविद्यालयस्य परिसर:
पम्पमहाकविमार्ग:, चामराजपेटे, बेङ्गलूरु – ५६००१८.

ಸಂಖ್ಯೆ: ಕಸಂವಿ/ಪ್ರ.ಸ./2017-18 1291-26 ದಿನಾಂಕ: 27.10.2017

ಮಾನ್ಯರೇ,

ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ **ಪ್ರಶಾಸನ ಸಮಿತಿ ನಲವತ್ತನೆಯ** ಸಭೆಯು ದಿನಾಂಕ: **27.10.2017ರ ಶುಕ್ರವಾರ ಪೂರ್ವಾಹ್ನ 11.00 ಗಂಟೆಗೆ** ವಿಶ್ವವಿದ್ಯಾಲಯದ ಸಭಾಂಗಣದಲ್ಲಿ ನಡೆಯಿತು. ಸಭೆಯ ಅಧ್ಯಕ್ಷತೆಯನ್ನು ಮಾನ್ಯ ಕುಲಪತಿಗಳು ವಹಿಸಿದ್ದರು. ಈ ಪತ್ರದೊಂದಿಗೆ ಆ ದಿನ ನಡೆದ ಸಭೆಯ ನಡಾವಳಿಯನ್ನು ತಮ್ಮ ಅವಗಾಹನೆಗೆ ಕಳುಹಿಸಿಕೊಡಲಾಗಿದೆ.

ಈ ಸಭೆಯ ನಡಾವಳಿಗಳಿಗೆ ಆಕ್ಷೇಪಣೆಗಳೇನಾದರೂ ಇದ್ದಲ್ಲಿ ಈ ಪತ್ರ ತಲುಪಿದ ದಿನಾಂಕದಿಂದ ಹತ್ತು ದಿನಗಳೊಳಗಾಗಿ ಸಲ್ಲಿಸಲು ಕೋರಲಾಗಿದೆ.

ವಂದನೆಗಳೊಂದಿಗೆ,

Shilpa
ಕುಲಸಚಿವರು
ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ
ಬೆಂಗಳೂರು – 560018.

ಇವರಿಗೆ,

1. **ಶ್ರೀಮತಿ ಸುಜಾತ ಗೌಡ,** # 30, 7ನೇ ಹಂತ, 2ನೇ ಮುಖ್ಯರಸ್ತೆ, ಬಿ.ಇ.ಎಂ.ಎಲ್. ಲೇಔಟ್, ಮೈಲಸಂದ್ರ, ಕೆಂಗೇರಿ, ಬೆಂಗಳೂರು – 560059.
2. **ಶ್ರೀ ಶಿವಕುಮಾರ್ ಎನ್.,** # 109, 2ನೇ ಮುಖ್ಯರಸ್ತೆ, 5ನೇ ಅಡ್ಡರಸ್ತೆ, ಪಾಂಡುರಂಗ ಬಡಾವಣೆ, ಅರಕೆರೆ ಗೇಟ್, ಬನ್ನೇರುಘಟ್ಟ ರಸ್ತೆ, ಬೆಂಗಳೂರು – 560076.
3. **ವಿದ್ವಾನ್ ಕೆ. ಭೀಮಪ್ಪ,** ನಂ. 26, ಅಂಬೇಡ್ಕರ್ ಕಲ್ಯಾಣ ಮಂಟಪದ ಹತ್ತಿರ, ರಾಜೇಂದ್ರ ನಗರ, ಚಿತ್ರದುರ್ಗ ಜಿಲ್ಲೆ.
4. **ಶ್ರೀ ಪರಪ್ಪ ಬಸಪ್ಪ ಬಾವಲತ್ತಿ,** ರಾಮಪುರ, ರಬಕವಿ, ಜಮಖಂಡಿ ತಾಲ್ಲೂಕು, ಬಾಗಲಕೋಟೆ ಜಿಲ್ಲೆ.
5. **ಪ್ರೊ. ಮೈಕೆಲ್,** ಸಂಸ್ಕೃತ ಪ್ರಾಧ್ಯಾಪಕರು, ಗುಲ್ಬರ್ಗಾ ವಿಶ್ವವಿದ್ಯಾಲಯ, ಜ್ಞಾನಗಂಗಾ, ಕಲಬುರಗಿ–585106.
6. **ಶ್ರೀಮತಿ ಜಯಶ್ರೀ ವಿ. ಕೊರತಿ,** ಕೆನರಾ ವೆಲ್ಫೇರ್ ಟ್ರಸ್ಟ್ ಎಜುಕೇಷನ್ ಕಾಲೇಜು, ದಾಂಡೇಲಿ, ಉತ್ತರ ಕನ್ನಡ ಜಿಲ್ಲೆ – 581325
7. **ವಿದ್ವಾನ್ ಎಂ. ಸಿದ್ಧಮಲ್ಲ ಸ್ವಾಮಿ,** ನಂ. 136/1, ಶ್ರೀ ನೀಲಕಂಠಸ್ವಾಮಿ ಮಠ, ಹರಿಶ್ಚಂದ್ರ ರಸ್ತೆ, ಖಿಲ್ಲೆ ಮೊಹಲ್ಲಾ, ಮೈಸೂರು–570009.
8. **ಶ್ರೀ ಗಜಾನನ ಲಕ್ಷ್ಮೀನಾರಾಯಣ ಭಟ್ಟ,** ಉಮ್ಮಚಗಿ, ಯಲ್ಲಾಪುರ ತಾಲ್ಲೂಕು, ಉತ್ತರ ಕನ್ನಡ ಜಿಲ್ಲೆ – 581347
9. **ಡಾ. ಕೆ. ಸುಧಾಕರ್,** ನಂ. 346/347, 'ಪ್ರೇಮವಿಲ್ಲಾ', 14ನೇ ಮುಖ್ಯರಸ್ತೆ, ಆರ್.ಎಂ.ವಿ. ಬಡಾವಣೆ, ಸದಾಶಿವನಗರ, ಬೆಂಗಳೂರು–80.
10. **ಕ್ಯಾಪ್ಟನ್ ಗಣೇಶ್ ಕಾರ್ಣಿಕ್,** ರೂಮ್ ನಂ. 145, 1ನೇ ಮಹಡಿ, ವಿಧಾನಸೌಧ, ಬೆಂಗಳೂರು–560001.
11. **ಪ್ರಧಾನ ಕಾರ್ಯದರ್ಶಿಗಳು,** ಉನ್ನತ ಶಿಕ್ಷಣ (ವಿಶ್ವವಿದ್ಯಾಲಯ), ಬಹುಮಹಡಿಗಳ ಕಟ್ಟಡ, ಬೆಂಗಳೂರು–560001
12. **ಅಪರ ಮುಖ್ಯ ಕಾರ್ಯದರ್ಶಿಗಳು,** ಹಣಕಾಸು ಇಲಾಖೆ, ವಿಧಾನಸೌಧ, ಬೆಂಗಳೂರು–560001
13. **ಸರ್ಕಾರದ ಕಾರ್ಯದರ್ಶಿ,** ಕಂದಾಯ ಇಲಾಖೆ (ಧಾರ್ಮಿಕ ದತ್ತಿ ವಿಭಾಗ) ಕರ್ನಾಟಕ ಸರ್ಕಾರದ ಸಚಿವಾಲಯ, ಬಹುಮಹಡಿ ಕಟ್ಟಡ, ಬೆಂಗಳೂರು–560001
14. **ಪ್ರಾದೇಶಿಕ ನಿರ್ದೇಶಕರು,** ಯುಜಿಸಿ–ನೈಋತ್ಯ ಪ್ರಾದೇಶಿಕ ಕೇಂದ್ರ, ಪ್ರಸನ್ನಕುಮಾರ್ ಬ್ಲಾಕ್, ಅರಮನೆ ರಸ್ತೆ, ಬೆಂಗಳೂರು–09,
15. **ನಿರ್ದೇಶಕರು,** ಪ್ರಾಚ್ಯವಸ್ತು ಮತ್ತು ಸಂಗ್ರಹಾಲಯ ನಿರ್ದೇಶನಾಲಯ, ಅರಮನೆ ಆವರಣ, ಮೈಸೂರು–570001.
16. **ಆಯುಕ್ತರು,** ಕನ್ನಡ ಮತ್ತು ಸಂಸ್ಕೃತಿ ನಿರ್ದೇಶನಾಲಯ, ಕನ್ನಡ ಭವನ, ಜೆ.ಸಿ. ರಸ್ತೆ, ಬೆಂಗಳೂರು–560002.
17. **ಆಯುಕ್ತರು,** ಕಾಲೇಜು ಶಿಕ್ಷಣ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು–560001
18. **ನಿರ್ದೇಶಕರು,** ತಾಂತ್ರಿಕ ಶಿಕ್ಷಣ ಇಲಾಖೆ, ತಾಂತ್ರಿಕ ಶಿಕ್ಷಣ ಭವನ, ಅರಮನೆ ರಸ್ತೆ ಬೆಂಗಳೂರು–560001
19. **ನಿರ್ದೇಶಕರು,** ಪದವಿಪೂರ್ವ ಶಿಕ್ಷಣ ಇಲಾಖೆ, 18 ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು–560012
20. **ನಿರ್ದೇಶಕರು,** ವೈದ್ಯಕೀಯ ಶಿಕ್ಷಣ ಇಲಾಖೆ, ಆನಂದರಾವ್ ವೃತ್ತ, ಬೆಂಗಳೂರು–560009
21. **ಆಯುಕ್ತರು,** ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು–560001

**ಪ್ರತಿಗಳು:**

1. **ಘನತೆವೆತ್ತ ರಾಜ್ಯಪಾಲರ ಪ್ರಧಾನ ಕಾರ್ಯದರ್ಶಿಗಳು,** ರಾಜಭವನ, ಬೆಂಗಳೂರು – 560001
2. **ಮಾನ್ಯ ಕುಲಪತಿಯವರ ಆಪ್ತಶಾಖೆ,** ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ, ಚಾಮರಾಜಪೇಟೆ, ಬೆಂಗಳೂರು.
3. ಕಛೇರಿ ಪ್ರತಿ 4. ರಕ್ಷತಾ ಪ್ರತಿ 5. ಜಾಲತಾಣಕ್ಕೆ ಅಳವಡಿಸಲು – ತುರ್ತು

ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ
ಶ್ರೀ ಚಾಮರಾಜೇಂದ್ರ ಸಂಸ್ಕೃತ ಮಹಾವಿದ್ಯಾಲಯ ಆವರಣ
ಪಂಪಮಹಾಕವಿ ರಸ್ತೆ, ಚಾಮರಾಜಪೇಟೆ, ಬೆಂಗಳೂರು – 560018.

कर्नाटक-संस्कृत-विश्वविद्यालय:
श्री चामराजेन्द्र संस्कृत महाविद्यालयस्य परिसर:
पम्पमहाकविमार्ग:, चामराजपेटे, बेङ्गलूरु – ५६००१८.

## 27.10.2017ರಂದು ನಡೆದ ಪ್ರಶಾಸನ ಸಮಿತಿ (ಸಿಂಡಿಕೇಟ್) 40ನೇ ಸಭೆಯ ನಡಾವಳಿ

ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ **ಪ್ರಶಾಸನ ಸಮಿತಿ 40ನೇ ಸಭೆಯು** ಮಾನ್ಯ ಕುಲಪತಿಗಳ ಅಧ್ಯಕ್ಷತೆಯಲ್ಲಿ **ಅಕ್ಟೋಬರ್ 27, 2017ರ ಶುಕ್ರವಾರ ಪೂರ್ವಾಹ್ನ 11.00** ಗಂಟೆಗೆ ವಿಶ್ವವಿದ್ಯಾಲಯದ ಸಭಾಂಗಣದಲ್ಲಿ ನಡೆಯಿತು. ಈ ಸಭೆಯಲ್ಲಿ ಕೆಳಕಂಡ ಮಾನ್ಯ ಸದಸ್ಯರು ಹಾಜರಿದ್ದರು.

**ಹಾಜರಿದ್ದವರು:**

| | | |
|---|---|---|
| ೧. | **ಪ್ರೊ. ಪದ್ಮಾಶೇಖರ್**, ಮಾನ್ಯ ಕುಲಪತಿಗಳು | ಅಧ್ಯಕ್ಷರು |
| ೨. | **ಶ್ರೀಮತಿ ಸುಜಾತ ಗೌಡ**, ಬೆಂಗಳೂರು | ಸದಸ್ಯರು |
| ೩. | **ಶ್ರೀ ಶಿವಕುಮಾರ್ ಎನ್.**, ಬೆಂಗಳೂರು | ಸದಸ್ಯರು |
| ೪. | **ಶ್ರೀ ಕೆ. ಭೀಮಪ್ಪ**, ನಿವೃತ್ತ ಶಿಕ್ಷಣಾಧಿಕಾರಿಗಳು, ಚಿತ್ರದುರ್ಗ | ಸದಸ್ಯರು |
| ೫. | **ಶ್ರೀ ಪರಪ್ಪ ಬಸಪ್ಪ ಬಾವಲತ್ತಿ**, ನಿವೃತ್ತ ಅಧ್ಯಾಪಕರು, ರಾಮಪುರ, ರಬಕವಿ | ಸದಸ್ಯರು |
| ೬. | **ಡಾ. ಮೈಕೆಲ್**, ಪ್ರಾಧ್ಯಾಪಕರು ಮತ್ತು ಡೀನ್, ಗುಲ್ಬರ್ಗಾ ವಿಶ್ವವಿದ್ಯಾಲಯ, ಕಲಬುರಗಿ | ಸದಸ್ಯರು |
| ೭. | **ಶ್ರೀಮತಿ ಜಯಶ್ರೀ ವಿ. ಕೊರತಿ**, ಪ್ರಾಚಾರ್ಯರು, ದಾಂಡೇಲಿ | ಸದಸ್ಯರು |
| ೮. | **ವಿದ್ವಾನ್ ಸಿದ್ಧಮಲ್ಲ ಸ್ವಾಮಿ**, ನಿವೃತ್ತ ಪ್ರಾಧ್ಯಾಪಕರು, ಮೈಸೂರು | ಸದಸ್ಯರು |
| ೯. | **ಶ್ರೀಮತಿ ಎಂ. ಶಿಲ್ಪ**, ಕುಲಸಚಿವರು | ಸದಸ್ಯ ಕಾರ್ಯದರ್ಶಿ |

**ಗೈರುಹಾಜರಿ:**

| | | |
|---|---|---|
| ೧. | **ವಿದ್ವಾನ್ ಗಜಾನನ ಲಕ್ಷ್ಮೀನಾರಾಯಣ ಭಟ್ಟ**, ನಿವೃತ್ತ ಪ್ರಾಚಾರ್ಯರು, ಉಮ್ಮಚಗಿ | ಸದಸ್ಯರು |
| ೨. | **ಡಾ. ಕೆ. ಸುಧಾಕರ್**, ಶಾಸಕರು(ಚಿಕ್ಕಬಳ್ಳಾಪುರ), ಬೆಂಗಳೂರು | ಸದಸ್ಯರು |
| ೩. | **ಕ್ಯಾಪ್ಟನ್ ಗಣೇಶ್ ಕಾರ್ಣಿಕ್**, ಮಾನ್ಯ ವಿಧಾನಪರಿಷತ್ ಸದಸ್ಯರು, ಬೆಂಗಳೂರು | ಸದಸ್ಯರು |
| ೪. | **ಪ್ರಧಾನ ಕಾರ್ಯದರ್ಶಿಗಳು**, ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು | ಸದಸ್ಯರು |
| ೫. | **ಅಪರ ಮುಖ್ಯ ಕಾರ್ಯದರ್ಶಿಗಳು**, ಹಣಕಾಸು ಇಲಾಖೆ, ಬೆಂಗಳೂರು | ಸದಸ್ಯರು |
| ೬. | **ಕಾರ್ಯದರ್ಶಿಗಳು**, ಕಂದಾಯ ಇಲಾಖೆ (ಧಾರ್ಮಿಕ ದತ್ತಿ ವಿಭಾಗ), ಬೆಂಗಳೂರು | ಸದಸ್ಯರು |
| ೭. | **ಪ್ರಾದೇಶಿಕ ನಿರ್ದೇಶಕರು**, ಯುಜಿಸಿ-ನೈಋತ್ಯ ಪ್ರಾದೇಶಿಕ ಕೇಂದ್ರ, ಬೆಂಗಳೂರು-09 | ಸದಸ್ಯರು |
| ೮. | **ನಿರ್ದೇಶಕರು**, ಪ್ರಾಚ್ಯವಸ್ತು ಮತ್ತು ಸಂಗ್ರಹಾಲಯ ನಿರ್ದೇಶನಾಲಯ, ಮೈಸೂರು | ಸದಸ್ಯರು |
| ೯. | **ಆಯುಕ್ತರು**, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು | ಸದಸ್ಯರು |
| ೧೦. | **ಆಯುಕ್ತರು**, ಕಾಲೇಜು ಶಿಕ್ಷಣ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು-560001 | ಸದಸ್ಯರು |
| ೧೧. | **ನಿರ್ದೇಶಕರು**, ತಾಂತ್ರಿಕ ಶಿಕ್ಷಣ ಇಲಾಖೆ, ತಾಂತ್ರಿಕ ಶಿಕ್ಷಣ ಭವನ, ಬೆಂಗಳೂರು-560001 | ಸದಸ್ಯರು |
| ೧೨. | **ನಿರ್ದೇಶಕರು**, ಪದವಿಪೂರ್ವ ಶಿಕ್ಷಣ ಇಲಾಖೆ, 18ನೇ ಅಡ್ಡರಸ್ತೆ, ಬೆಂಗಳೂರು-560012 | ಸದಸ್ಯರು |
| ೧೩. | **ನಿರ್ದೇಶಕರು**, ವೈದ್ಯಕೀಯ ಶಿಕ್ಷಣ ಇಲಾಖೆ, ಆನಂದರಾವ್ ವೃತ್ತ, ಬೆಂಗಳೂರು-560009 | ಸದಸ್ಯರು |
| ೧೪. | **ನಿರ್ದೇಶಕರು**, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು-560001 | ಸದಸ್ಯರು |

ಸಭೆಯ ಆರಂಭಕ್ಕೆ ಮುನ್ನ ಮಾನ್ಯ ಕುಲಪತಿಗಳು ಎಲ್ಲ ಗೌರವಾನ್ವಿತ ಸದಸ್ಯರನ್ನು ಸ್ವಾಗತಿಸಿದರು. ಅನಂತರ ಸಭೆಯಲ್ಲಿ ಕೆಳಕಂಡ ಕಾರ್ಯಸೂಚಿಗಳು ಮಾನ್ಯ ಕುಲಪತಿಗಳ ಅಧ್ಯಕ್ಷತೆಯಲ್ಲಿ ಮಂಡಿತವಾಗಿ ನಿರ್ಣಯಗೊಂಡವು.

| ವಿ.ಸಂ. | **ವಿಷಯ, ಟಿಪ್ಪಣಿ ಮತ್ತು ನಿರ್ಣಯ** | |
|---|---|---|
| ವಿಷಯ 01 | ವಿಷಯ ಮತ್ತು ಟಿಪ್ಪಣಿ | **ಪ್ರಶಾಸನ ಸಮಿತಿ 39ನೇ ಸಭೆಯ ಅನುಪಾಲನಾ ವರದಿಯನ್ನು ಅನುಮೋದಿಸುವ ಬಗೆಗೆ.**<br>ಪ್ರಶಾಸನ ಸಮಿತಿ 39ನೇ ಸಭೆಯು ಮಾನ್ಯ ಕುಲಪತಿಗಳ ಅಧ್ಯಕ್ಷತೆಯಲ್ಲಿ ದಿನಾಂಕ: 19.08.2017 ರಂದು ನಡೆಯಿತು. ಸಭೆಯ ನಿರ್ಣಯದಂತೆ ಕೈಗೊಳ್ಳಲಾದ ಅನುಪಾಲನಾ ವರದಿಯನ್ನು ಪ್ರಶಾಸನ ಸಮಿತಿಯ ಅನುಮೋದನೆಗಾಗಿ ಮಂಡಿಸಿದೆ. |
| | ನಿರ್ಣಯ | **ಸಭೆಯು ಪ್ರಶಾಸನ ಸಮಿತಿ 39ನೇ ಸಭೆಯ ಅನುಪಾಲನಾ ವರದಿಯನ್ನು ಪರಿಶೀಲಿಸಿ, ಒಪ್ಪಿಗೆಯನ್ನು ನೀಡಿತು.** |

| | | |
|---|---|---|
| ವಿಷಯ<br>02 | ವಿಷಯ<br>ಮತ್ತು<br>ಟಿಪ್ಪಣಿ | **ಭಾರತದ ಸಂವಿಧಾನ ಅನುಚ್ಛೇದ 371ಜೆ ಅನ್ವಯ ಹೈದ್ರಾಬಾದ್-ಕರ್ನಾಟಕ ಸ್ಥಳೀಯ ಅಭ್ಯರ್ಥಿಗಳಿಗೆ ಮೀಸಲಿಟ್ಟಿರುವ ಹುದ್ದೆಗಳನ್ನು ಭರ್ತಿ ಮಾಡುವ ಬಗೆಗೆ.**<br>ದಿನಾಂಕ: 14.02.2017ರಂದು ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಹಾಗೂ ಹೈದ್ರಾಬಾದ್-ಕರ್ನಾಟಕ ಉಪಸಮಿತಿಯ ಅಧ್ಯಕ್ಷರು –ಇವರ ಅಧ್ಯಕ್ಷತೆಯಲ್ಲಿ ಜರುಗಿದ ಸಭೆಯಲ್ಲಿ ತೀರ್ಮಾನಿಸಲಾದಂತೆ ಹಾಗೂ ಸರ್ಕಾರದ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಇವರು ಕಾಲಕಾಲಕ್ಕೆ ಸಭೆ ಜರುಗಿಸಿ, ಹೈದ್ರಾಬಾದ್-ಕರ್ನಾಟಕ ಪ್ರದೇಶದ ಅಭ್ಯರ್ಥಿಗಳಿಗೆ ಮೀಸಲಿಟ್ಟ ಹುದ್ದೆಗಳನ್ನು ತ್ವರಿತವಾಗಿ ಭರ್ತಿ ಮಾಡಿ ಇಲಾಖೆಯ ಪ್ರಗತಿ ವರದಿಯನ್ನು ಸಲ್ಲಿಸಲು ಸೂಚಿಸಿರುತ್ತಾರೆ. ಸದರಿ ಹುದ್ದೆಗಳನ್ನು ಭರ್ತಿ ಮಾಡಲು ವಿಳಂಬ ನೀತಿ ಅನುಸರಿಸುತ್ತಿರುವ ಅಧಿಕಾರಿಗಳ ವಿರುದ್ಧ ಕಠಿಣ ಶಿಸ್ತಿನ ಕ್ರಮವನ್ನು ತೆಗೆದುಕೊಳ್ಳಲಾಗುವುದೆಂದು ಸಹ ಸೂಚಿಸಲಾಗಿರುತ್ತದೆ. ಆದ್ದರಿಂದ, ಉನ್ನತ ಶಿಕ್ಷಣ ಇಲಾಖೆಯು ದಿನಾಂಕ: 17.07.2017ರಂದು ಹೊರಡಿಸಲಾದ ಸುತ್ತೋಲೆಯ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಪರಿಪಾಲನೆ ಮಾಡುವ ಷರತ್ತಿಗೊಳಪಟ್ಟು ಹೈದ್ರಾಬಾದ್-ಕರ್ನಾಟಕ ಪ್ರದೇಶದ ಅಭ್ಯರ್ಥಿಗಳಿಗೆ ಮೀಸಲಿಟ್ಟಿರುವ ಬೋಧಕ/ ಬೋಧಕೇತರ ಹುದ್ದೆಗಳನ್ನು ಮಾತ್ರ ಎರಡು ವಾರದೊಳಗಾಗಿ ಭರ್ತಿ ಮಾಡಿಕೊಳ್ಳುವಂತೆ ಸರ್ಕಾರವು ಈ ಮೂಲಕ ಅನುಮತಿ ನೀಡಿದೆ ಹಾಗೂ ಈ ಬಗ್ಗೆ ಕೈಗೊಂಡ ಕ್ರಮದ ಅನುಪಾಲನಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸುವಂತೆ ಪತ್ರ ಸಂಖ್ಯೆ: ಇಡಿ 572 ಯುಎನ್ಇ 2014; ದಿನಾಂಕ: 27.09.2017ರಲ್ಲಿ ತಿಳಿಸಲಾಗಿದೆ. ಈ ಹಿನ್ನೆಲೆಯಲ್ಲಿ ಸರ್ಕಾರದ ಅನುಮತಿ ಹಾಗೂ ಸೂಚನೆಯನ್ವಯ ಈ ಕೆಳಗಿನಂತೆ ಕ್ರಮವಹಿಸಲಾಗುತ್ತಿದ್ದು, ಪ್ರಶಾಸನ ಸಮಿತಿಯ ಅವಗಾಹನೆ ಮತ್ತು ಅನುಮೋದನೆಗಾಗಿ ಮಂಡಿಸಿದೆ.<br>• ರಾಜ್ಯ ವೇತನಶ್ರೇಣಿಯ ಬೋಧಕ ಹಾಗೂ ಬೋಧಕೇತರ ಹುದ್ದೆಗಳ ನೇಮಕಾತಿಗಾಗಿ 'ಸಂಖ್ಯೆ: ಕಸಂವಿ/ಕ.ರಾ.ವೇ/ಬೋಧಕ ಬೋಧಕೇತರ ಹುದ್ದೆ ನೇ 17/2016-17; ದಿನಾಂಕ: 03.02.2017'ರ ಅನ್ವಯ ಅಧಿಸೂಚನೆಯನ್ನು ಹೊರಡಿಸಲಾಗಿದೆ. ಈ ಅಧಿಸೂಚನೆಯಲ್ಲಿ ಹೈದ್ರಾಬಾದ್-ಕರ್ನಾಟಕ ಪ್ರದೇಶದ ಅಭ್ಯರ್ಥಿಗಳಿಗೆ ಮೀಸಲಿರಿಸಿದ 'ಯೋಜನಾ ಸಹಾಯಕರು (ಶೈ)'-02 (ಪ.ಜಾ.-01; ಸಾ-01); ಸಿಸ್ಟಂ ಅನಲಿಸ್ಟ್-01(ಸಾ); ಸಹಾಯಕ ನಿರ್ದೇಶಕರು-01(ಸಾ); ಗ್ರಂಥಾಲಯ ಸಹಾಯಕ-01(ಸಾ); ಡಾಟಾ ಎಂಟ್ರಿ ಆಪರೇಟರ್-01(ಸಾ) ಮತ್ತು ಟೆಲಿಫೋನ್ ಆಪರೇಟರ್-01(ಸಾ) ಹುದ್ದೆಗಳು ಸೇರಿವೆ. ಸರ್ಕಾರವು ಪತ್ರಸಂಖ್ಯೆ: ಇಡಿ 572 ಯುಎನ್ಇ 2014; ದಿನಾಂಕ: 27.09.2017ರಲ್ಲಿ ಅನುಮತಿ ನೀಡಿರುವ ಹಿನ್ನೆಲೆಯಲ್ಲಿ ಈ ಹುದ್ದೆಗಳ ನೇಮಕಾತಿಗಾಗಿ ಅರ್ಜಿ ಸಲ್ಲಿಸಿರುವ ಅರ್ಹ ಅಭ್ಯರ್ಥಿಗಳಿಗೆ ಲಿಖಿತ ಪರೀಕ್ಷೆ ಮತ್ತು ಸಂದರ್ಶನವನ್ನು ನಡೆಸಲು ಕ್ರಮವಹಿಸಲಾಗುತ್ತಿದೆ.<br>• ಯುಜಿಸಿ ವೇತನಶ್ರೇಣಿಯ ಬೋಧಕ-ಬೋಧಕೇತರ ಹುದ್ದೆಗಳ ನೇಮಕಾತಿಗಾಗಿ 'KSU: UGC-PS/Teaching & Non-Teaching Apmnt./2016-17; Date: 03.02.2017' ಅನ್ವಯ ಅಧಿಸೂಚನೆಯನ್ನು ಹೊರಡಿಸಲಾಗಿತ್ತು. ಈ ಅಧಿಸೂಚನೆಯಲ್ಲಿ ಹೈದ್ರಾಬಾದ್-ಕರ್ನಾಟಕ ಪ್ರದೇಶದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಪ್ರಾಧ್ಯಾಪಕರು-01(ಸಾ); ಸಹಪ್ರಾಧ್ಯಾಪಕರು-01(ಪ.ಜಾ.) ಮತ್ತು ಸಹಾಯಕ ಪ್ರಾಧ್ಯಾಪಕರು-01(ಪ.ಜಾ.) ಹುದ್ದೆಗಳು ಸೇರಿವೆ. ಆದರೆ, ಬೋಧಕ-ಬೋಧಕೇತರ ಹುದ್ದೆಗಳ ನೇಮಕಾತಿಗೆ ಸರ್ಕಾರವು ಹೊರಡಿಸಿರುವ ಸುತ್ತೋಲೆ (ಸಂಖ್ಯೆ: ಇಡಿ 136 ಯುಎನ್ಇ 2017; ದಿನಾಂಕ: 17.07.2017)ಯ ಮಾರ್ಗಸೂಚಿ ಹಾಗೂ UGC Regulations 2016 ಅನ್ವಯ ಕ್ರಮವಹಿಸಲು ಸೂಚಿಸಿರುವ ಹಿನ್ನೆಲೆಯಲ್ಲಿ, ಯುಜಿಸಿ ವೇತನಶ್ರೇಣಿಯ ಬೋಧಕ-ಬೋಧಕೇತರ ಹುದ್ದೆಗಳ ನೇಮಕಾತಿಗಾಗಿ ಮರುಅಧಿಸೂಚನೆಯನ್ನು (KSU: UGC-PS/Teaching & Non-Teaching Apmnt./2016-17; Date: 04.10.2017) ಹೊರಡಿಸಲಾಗಿದೆ.<br>• ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದರಾಬಾದ್-ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ಆದೇಶ-2013ರ ಅಡಿಯಲ್ಲಿ ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯಕ್ಕೆ ಮಂಜೂರಾಗಿರುವ ಒಟ್ಟು 133 ಬೋಧಕ-ಬೋಧಕೇತರ ಹುದ್ದೆಗಳ ವಿವಿಧ ವೃಂದಗಳಲ್ಲಿ ಹೈದರಾಬಾದ್-ಕರ್ನಾಟಕ ಪ್ರದೇಶದವರಿಗಾಗಿ ಶೇ. 08ರಷ್ಟು ಹುದ್ದೆಗಳನ್ನು ಮೀಸಲಿರಿಸಿ ಅಧಿಸೂಚನೆ (ಸಂಖ್ಯೆ: ಕಸಂವಿ1/ಹೈ.ಕ.ಮೀ.ಅ/2015-16; ದಿನಾಂಕ: 18.02.2016) ಯನ್ನು ಹೊರಡಿಸಲಾಗಿದೆ. |

| | | |
|---|---|---|
| | | ಹೈದ್ರಾಬಾದ್–ಕರ್ನಾಟಕ ಪ್ರದೇಶದ ಅಭ್ಯರ್ಥಿಗಳಿಗೆ ಸಂಬಂಧಿಸಿದಂತೆ ಈಗಾಗಲೇ ನೇಮಕಗೊಂಡಿರುವ ಹಾಗೂ ಅಧಿಸೂಚನೆಯನ್ನು ಹೊರಡಿಸಿರುವ ಹುದ್ದೆಗಳನ್ನು ಹೊರತುಪಡಿಸಿದಂತೆ, ಹೈದ್ರಾಬಾದ್–ಕರ್ನಾಟಕ ಪ್ರದೇಶದ ಅಭ್ಯರ್ಥಿಗಳಿಗಾಗಿ ಒಟ್ಟು 05 ಹುದ್ದೆಗಳು (ಸಹಪ್ರಾಧ್ಯಾಪಕರು–01; ಸಹಾಯಕ ಗ್ರಂಥಪಾಲಕರು–01; ಯೋಜನಾ ಸಹಾಯಕರು–01; ಹಿರಿಯ ಸಹಾಯಕರು–01 ಹಾಗೂ ವಿಶ್ರಾಂತಿಗೃಹ ಮೇಲ್ವಿಚಾರಕರು–01)ಮೀಸಲಿರಿಸಲಾಗಿದೆ. ಸರ್ಕಾರದ ಸೂಚನೆಯಂತೆ, ಈ ಹುದ್ದೆಗಳನ್ನು ತ್ವರಿತವಾಗಿ ಭರ್ತಿ ಮಾಡಲು ಕ್ರಮವಹಿಸಬೇಕಾಗಿದ್ದು, ಹುದ್ದೆಗಳ ನೇಮಕಾತಿಗೆ ಅಧಿಸೂಚನೆಯನ್ನು ಹೊರಡಿಸಲು ಸಭೆಯ ಅನುಮೋದನೆಗಾಗಿ ಮಂಡಿಸಿದೆ. |
| | ನಿರ್ಣಯ | **ಸಭೆಯು ಎಲ್ಲ ವಿವರಗಳನ್ನು ಸಂಪೂರ್ಣವಾಗಿ ಪರಿಶೀಲಿಸಿತು. ಸರ್ಕಾರದ ಆದೇಶದನ್ವಯ ಹೈದರಾಬಾದ್–ಕರ್ನಾಟಕ ಪ್ರದೇಶದವರಿಗೆ ಮೀಸಲಿಟ್ಟ ಹುದ್ದೆಗಳನ್ನು ಭರ್ತಿ ಮಾಡುವುದು ಅವಶ್ಯವಾಗಿರುವುದನ್ನು ಸಭೆಯು ಮನಗಂಡಿತು. ಈ ಹಿನ್ನೆಲೆಯಲ್ಲಿ, ರಾಜ್ಯ ವೇತನಶ್ರೇಣಿಯ ಬೋಧಕೇತರ ಹುದ್ದೆಗಳ ನೇಮಕಾತಿ ಪ್ರಕ್ರಿಯೆಯನ್ನು ಮುಂದುವರೆಸಿರುವುದಕ್ಕೆ ಸಭೆಯು ಒಪ್ಪಿಗೆಯನ್ನು ನೀಡಿತು.**<br>**ಯುಜಿಸಿ–2016 ನಿಯಮಾವಳಿಗಳ ಅನ್ವಯ ಯುಜಿಸಿ ವೇತನಶ್ರೇಣಿಯ ಬೋಧಕ–ಬೋಧಕೇತರ ಹುದ್ದೆಗಳ ನೇಮಕಾತಿ ಪ್ರಕ್ರಿಯೆಯನ್ನು ನಡೆಸಬೇಕಿರುವುದರಿಂದ, ಈ ಹುದ್ದೆಗಳ ನೇಮಕಾತಿಗಾಗಿ ಮತ್ತೊಮ್ಮೆ ಅಧಿಸೂಚನೆಯನ್ನು ಹೊರಡಿಸಿರುವುದಕ್ಕೆ ಸಭೆಯು ಅನುಮೋದನೆಯನ್ನು ನೀಡಿತು.**<br>**ಸರ್ಕಾರದ ಆದೇಶದಂತೆ, ಹೈದರಾಬಾದ್–ಕರ್ನಾಟಕ ಪ್ರದೇಶದವರಿಗೆ ಮೀಸಲಿರಿಸಿದ ಹುದ್ದೆಗಳನ್ನು ಭರ್ತಿ ಮಾಡುವುದಕ್ಕೆ ಸಂಬಂಧಿಸಿದಂತೆ ಮುಂದಿನ ಕ್ರಮಗಳನ್ನು ಕೈಗೊಳ್ಳಲು ಹಾಗೂ ಈ ಹುದ್ದೆಗಳ ನೇಮಕಾತಿ ಅಧಿಸೂಚನೆಯನ್ನು ಹೊರಡಿಸಲು ಸಭೆಯು ಅನುಮೋದನೆಯನ್ನು ನೀಡಿತು.** |
| ವಿಷಯ 03 | ವಿಷಯ ಮತ್ತು ಟಿಪ್ಪಣಿ | **ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ ಆರನೇ ದೀಕ್ಷಾಂತ ಘಟಿಕೋತ್ಸವವನ್ನು ನಡೆಸುವ ಬಗೆಗೆ.**<br>ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯವು ಈಗಾಗಲೇ ಐದು ದೀಕ್ಷಾಂತ ಘಟಿಕೋತ್ಸವಗಳನ್ನು ಯಶಸ್ವಿಯಾಗಿ ನಡೆಸಿದೆ. 2015–16ನೇ ಸಾಲಿನಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಪದವಿ ಪ್ರಮಾಣಪತ್ರಗಳನ್ನು ನೀಡಬೇಕಾಗಿದ್ದು, ಅದಕ್ಕಾಗಿ ಆರನೇ ದೀಕ್ಷಾಂತ ಘಟಿಕೋತ್ಸವವನ್ನು ಆಯೋಜಿಸಬೇಕಾಗಿದೆ. ಯುಜಿಸಿ ನಿಯಮಾನುಸಾರ ಫಲಿತಾಂಶವನ್ನು ಘೋಷಿಸಿದ ಆರು ತಿಂಗಳ ಒಳಗೆ ಪದವಿ ಪ್ರಮಾಣಪತ್ರಗಳನ್ನು ನೀಡಬೇಕಾಗಿರುವುದರಿಂದ ಆರನೇ ದೀಕ್ಷಾಂತ ಘಟಿಕೋತ್ಸವದಲ್ಲಿಯೇ 2016–17ನೇ ಸಾಲಿನಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೂ ಸಹ ಪದವಿ ಪ್ರಮಾಣಪತ್ರಗಳನ್ನು ನೀಡಬಹುದಾಗಿದೆ. 2015–16 ಮತ್ತು 2016–17 ಎರಡೂ ಶೈಕ್ಷಣಿಕ ವರ್ಷಗಳನ್ನು ಸೇರಿಕೊಂಡಂತೆ ಆಯೋಜಿಸುತ್ತಿರುವ ಆರನೇ ದೀಕ್ಷಾಂತ ಘಟಿಕೋತ್ಸವ ಸಮಾರಂಭಕ್ಕೆ ರೂ. 6.00 ಲಕ್ಷಗಳು ವೆಚ್ಚವಾಗಬಹುದೆಂದು ಅಂದಾಜಿಸಲಾಗಿದೆ. ದೀಕ್ಷಾಂತ ಘಟಿಕೋತ್ಸವ ಆಯೋಜಿಸುವ ಸಂಬಂಧ ಘನತೆವೆತ್ತ ರಾಜ್ಯಪಾಲರಿಂದ ಅನುಮೋದನೆ ಪಡೆಯಬೇಕಿದೆ. ಮುಂದಿನ ಕ್ರಮವಹಿಸಲು ಅನುಮೋದನೆಗೆ ಮಂಡಿಸಿದೆ. |
| | ನಿರ್ಣಯ | **ಸಭೆಯು ವಿಶ್ವವಿದ್ಯಾಲಯದ ಆರನೇ ದೀಕ್ಷಾಂತ ಘಟಿಕೋತ್ಸವವನ್ನು ನಡೆಸಲು ಹಾಗೂ ಈ ಸಮಾರಂಭಕ್ಕೆ ತಗಲುವ ಅಂದಾಜುವೆಚ್ಚದ ಮೊತ್ತಕ್ಕೆ ಒಪ್ಪಿಗೆಯನ್ನು ನೀಡಿತು. ಘನತೆವೆತ್ತ ರಾಜ್ಯಪಾಲರಿಂದ ಅನುಮತಿಯನ್ನು ಪಡೆದು ಆದಷ್ಟೂ ಬೇಗ ಘಟಿಕೋತ್ಸವವನ್ನು ನಡೆಸಬೇಕೆಂದು ಸಭೆಯು ಅಭಿಪ್ರಾಯಪಟ್ಟಿತು.** |
| ವಿಷಯ 04 | ವಿಷಯ ಮತ್ತು ಟಿಪ್ಪಣಿ | **ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ ಗೌರವ ಡಿ.ಲಿಟ್ ಪದವಿಗೆ ವಿದ್ವಾಂಸರ ಹೆಸರನ್ನು ಸೂಚಿಸುವ ಬಗೆಗೆ.**<br>ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ ಆರನೇ ದೀಕ್ಷಾಂತ ಘಟಿಕೋತ್ಸವವನ್ನು ನಡೆಸಲು ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಲಾಗುತ್ತಿದೆ. ಪ್ರತಿ ವರ್ಷದಂತೆ, ವಿಶ್ವವಿದ್ಯಾಲಯದ ಗೌರವ ಡಿ.ಲಿಟ್. ಪದವಿಯನ್ನು ನೀಡಲು ನಿರ್ಣಯಿಸಿದ್ದು, ಕರ್ನಾಟಕ ರಾಜ್ಯಪಾಲರ ಸಚಿವಾಲಯದ ಸುತ್ತೋಲೆ 'ಸಂಖ್ಯೆ: ಜಿಎಸ್ 02 ಜಿಯುಎಂ 2016; ದಿನಾಂಕ: 18.02.2016'ರ ಸೂಚನೆಗಳನ್ವಯ ಕ್ರಮವಹಿಸಬೇಕಾಗಿದೆ. ಈ ಹಿನ್ನೆಲೆಯಲ್ಲಿ, ವಿಶ್ವವಿದ್ಯಾಲಯದ ಆರನೇ ದೀಕ್ಷಾಂತ ಘಟಿಕೋತ್ಸವದಲ್ಲಿ ನೀಡಲಾಗುವ ಗೌರವ ಡಿ.ಲಿಟ್. ಪದವಿಗೆ ಅರ್ಹ/ಹಿರಿಯ ವಿದ್ವಾಂಸರ ಹೆಸರುಗಳನ್ನು ಸ್ವವಿವರಗಳೊಂದಿಗೆ ಸೂಚಿಸಲು ಪ್ರಶಾಸನ ಸಮಿತಿಯನ್ನು ಕೋರಿದೆ. |
| | ನಿರ್ಣಯ | **ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ ಗೌರವ ಡಿ.ಲಿಟ್ ಪದವಿಗೆ ವಿದ್ವಾಂಸರ ಹೆಸರನ್ನು ಸೂಚಿಸಲು 10 ದಿನಗಳ ಕಾಲಾವಕಾಶವನ್ನು ನೀಡುವಂತೆ ಸದಸ್ಯರು ಕೋರಿದರು ಹಾಗೂ ಈ ಕೆಳಕಂಡ ವಿದ್ವಾಂಸರ ಹೆಸರನ್ನು ಸೂಚಿಸಿದರು. ಮುಂದಿನ ಕ್ರಮಗಳನ್ನು ಕೈಗೊಳ್ಳಲು ಕುಲಪತಿಗಳಿಗೆ ಅಧಿಕಾರವನ್ನು ಸಭೆಯು ನೀಡಿತು.**<br>**1. ಡಾ. ಶ್ರೀ ಶ್ರೀ ಶ್ರೀ ಶಾಂತವೀರ ಮಹಾಸ್ವಾಮೀಜಿಯವರು, ಕೋಳದಮಠ ಮಹಾಸಂಸ್ಥಾನ, ಬೆಂಗಳೂರು**<br>**2. ಶ್ರೀ ಶ್ರೀ ಪ್ರಕಾಶನಾಥ ಸ್ವಾಮೀಜಿ, ಶ್ರೀ ಆದಿಚುಂಚನಗಿರಿ ಶಾಖಾಮಠ, ಬೆಂಗಳೂರು** |

| | | |
|---|---|---|
| ವಿಷಯ 05 | ವಿಷಯ ಮತ್ತು ಟಿಪ್ಪಣಿ | **ಎನ್.ಎಫ್.ಸಿ. (Near Field Communication) ತಂತ್ರಾಂಶವನ್ನು ಒಳಗೊಂಡ ಪದವಿ ಪ್ರಮಾಣಪತ್ರಗಳನ್ನು ಮುದ್ರಿಸುವ ಬಗೆಗೆ.**<br>ಸರ್ಕಾರದ ಸೂಚನೆನಾನುಸಾರ (ಸುತ್ತೋಲೆ ಸಂಖ್ಯೆ: ಇಡಿ 234 ಯುಆರ್‌ಸಿ 2017; ದಿನಾಂಕ: 05.06.2017) ವಿದ್ಯಾರ್ಥಿಗಳಿಗೆ ಎನ್.ಎಫ್.ಸಿ. ತಂತ್ರಾಂಶವನ್ನು ಒಳಗೊಂಡ ಪದವಿ ಪ್ರಮಾಣಪತ್ರಗಳನ್ನು ನೀಡಬೇಕಾಗಿದೆ. 2015-16 ಹಾಗೂ 2016-17ನೇ ಸಾಲಿನ ವಿದ್ಯಾರ್ಥಿಗಳಿಗೆ ಎನ್.ಎಫ್.ಸಿ. ತಂತ್ರಾಂಶವನ್ನು ಒಳಗೊಂಡ ಪ್ರಮಾಣಪತ್ರಗಳನ್ನು ಮುದ್ರಿಸಲು ರೂ. 3.00 ಲಕ್ಷ (ಮೂರು ಲಕ್ಷ ರೂಪಾಯಿಗಳು ಮಾತ್ರ) ವೆಚ್ಚವಾಗಬಹುದೆಂದು ಅಂದಾಜಿಸಲಾಗಿದ್ದು, ಈ ಅಂದಾಜು ವೆಚ್ಚಕ್ಕೆ ಪ್ರಶಾಸನ ಸಮಿತಿಯ ಅನುಮೋದನೆಗಾಗಿ ಮಂಡಿಸಿದೆ. |
| | ನಿರ್ಣಯ | **ಎನ್.ಎಫ್.ಸಿ. (Near Field Communication) ತಂತ್ರಾಂಶವನ್ನೊಳಗೊಂಡ ಪದವಿ ಪ್ರಮಾಣಪತ್ರಗಳನ್ನು ನೀಡುವುದಕ್ಕೆ ಹಾಗೂ ಅಂದಾಜುವೆಚ್ಚದ ಮೊತ್ತಕ್ಕೆ ಸಭೆಯು ಅನುಮೋದನೆಯನ್ನು ನೀಡಿತು.** |
| ವಿಷಯ 06 | ವಿಷಯ ಮತ್ತು ಟಿಪ್ಪಣಿ | **ಆಯಾ ಶಾಸ್ತ್ರಭಾಗಗಳಲ್ಲಿ ಅತಿಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ದತ್ತಿನಿಧಿ 'ಸ್ವರ್ಣಪದಕ' ನೀಡುವ ಬಗೆಗೆ.**<br>2015-16 ಹಾಗೂ 2016-17ನೇ ಸಾಲಿನ ಎಂ.ಎ. ವಿದ್ವದುತ್ತಮಾ ಪರೀಕ್ಷೆಗಳ ವಿವಿಧ ಶಾಸ್ತ್ರ/ವೇದ ಭಾಗಗಳಲ್ಲಿ ವಿಶಿಷ್ಟಶ್ರೇಣಿ ಪಡೆದು ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ದತ್ತಿನಿಧಿ 'ಸ್ವರ್ಣಪದಕ'ವನ್ನು ನೀಡಬೇಕಾಗಿದ್ದು, ವಿದ್ಯಾರ್ಥಿಗಳ ಆಯ್ಕೆಗಾಗಿ ಉಪಸಮಿತಿಯನ್ನು ರಚಿಸಬೇಕಿದೆ. ಈ ಉಪಸಮಿತಿಯ ನಿರ್ಣಯದಂತೆ, ದತ್ತಿನಿಧಿ ಮೊತ್ತಕ್ಕೆ ಸ್ವೀಕೃತವಾಗುವ ಬಡ್ಡಿಹಣದಲ್ಲಿ 'ಸ್ವರ್ಣಪದಕ'ವನ್ನು ಸಿದ್ಧಪಡಿಸಬೇಕಾಗಿದೆ. ಮುಂದಿನ ಕ್ರಮವಹಿಸಲು ಪ್ರಶಾಸನ ಸಮಿತಿಯ ಅನುಮೋದನೆಗಾಗಿ ಮಂಡಿಸಿದೆ. |
| | ನಿರ್ಣಯ | **ದತ್ತಿನಿಧಿ 'ಸ್ವರ್ಣಪದಕ' ಪುರಸ್ಕಾರವನ್ನು ನೀಡುವುದಕ್ಕೆ ಸಂಬಂಧಿಸಿದಂತೆ ಮುಂದಿನ ಕ್ರಮಗಳನ್ನು ಕೈಗೊಳ್ಳಲು ಸಭೆಯು ಅನುಮೋದನೆಯನ್ನು ನೀಡಿತು. ಆದರೆ, ಪ್ರಶಾಸನ ಸಮಿತಿಯು ಈ ಹಿಂದೆ 11 ದತ್ತಿಯನ್ನು ಒಪ್ಪಿದ್ದು, 11 ಪದಕಗಳಿಗೆ ದತ್ತಿನಿಧಿಯ ಬಡ್ಡಿಯನ್ನು ಬಳಸಿ, ಉಳಿದ ಶಾಸ್ತ್ರಗಳಿಗೆ ಕೊಡುತ್ತಿರುವ 3 ಚಿನ್ನದ ಪದಕಗಳಿಗೆ ಧಾರ್ಮಿಕ ದತ್ತಿ ಇಲಾಖೆ ಕೊಟ್ಟಿರುವ ಹಣದಿಂದ ಬರುವ ಬಡ್ಡಿಯನ್ನು ಬಳಸುವಂತೆ ಸಭೆಯು ನಿರ್ದೇಶನ ನೀಡಿತು.** |
| ವಿಷಯ 07 | ವಿಷಯ ಮತ್ತು ಟಿಪ್ಪಣಿ | **ಇನ್‌ಫೋಸಿಸ್ ಫೌಂಡೇಶನ್ ದತ್ತಿನಿಧಿಯ 'ನಗದುಪುರಸ್ಕಾರ' ನೀಡುವ ಬಗೆಗೆ.**<br>2015-16 ಹಾಗೂ 2016-17ನೇ ಸಾಲಿನ ಎಂ.ಎ. ವಿದ್ವದುತ್ತಮಾ ಪರೀಕ್ಷೆಗಳಲ್ಲಿ ಅತಿಹೆಚ್ಚು ಅಂಕಗಳನ್ನು ಪಡೆದು ಉತ್ತೀರ್ಣರಾದ ತಲಾ ನಾಲ್ಕು ವಿದ್ಯಾರ್ಥಿಗಳಿಗೆ ಹಾಗೂ ಬಿ.ಎ. ವಿದ್ವನ್ಮಧ್ಯಮಾ ಪರೀಕ್ಷೆಗಳಲ್ಲಿ ಅತಿಹೆಚ್ಚು ಅಂಕಗಳನ್ನು ಪಡೆದು ಉತ್ತೀರ್ಣರಾದ ತಲಾ ಆರು ವಿದ್ಯಾರ್ಥಿಗಳಿಗೆ ಇನ್‌ಫೋಸಿಸ್ ಫೌಂಡೇಶನ್ ಸ್ಥಾಪಿಸಿರುವ ದತ್ತಿನಿಧಿಯ 'ನಗದು ಪುರಸ್ಕಾರ'ವನ್ನು ನೀಡಬೇಕಾಗಿದೆ. ಈ ಹಿನ್ನೆಲೆಯಲ್ಲಿ ಇನ್‌ಫೋಸಿಸ್ ಫೌಂಡೇಶನ್ ಸ್ಥಾಪಿಸಿರುವ ದತ್ತಿನಿಧಿ ಮೂಲಧನ 20 ಲಕ್ಷ ರೂಪಾಯಿಗಳಿಗೆ ಸ್ವೀಕೃತವಾಗುವ ಬಡ್ಡಿ ಹಣವನ್ನು 2015-16 ಹಾಗೂ 2016-17ನೇ ಸಾಲಿನ ವಿದ್ಯಾರ್ಥಿಗಳಿಗೆ ಸಮನಾಗಿ ಹಂಚಿಕೆ ಮಾಡಲು ಪ್ರಶಾಸನ ಸಮಿತಿಯ ಅನುಮೋದನೆಗಾಗಿ ಮಂಡಿಸಿದೆ. |
| | ನಿರ್ಣಯ | **ಇನ್‌ಫೋಸಿಸ್ ಫೌಂಡೇಶನ್ ಸಂಸ್ಥೆಯ ದತ್ತಿನಿಧಿ 'ನಗದು ಪುರಸ್ಕಾರ'ವನ್ನು 2015-16; 2016-17 -ಎರಡೂ ಸಾಲಿನ ವಿದ್ಯಾರ್ಥಿಗಳಿಗೆ ಸಮನಾಗಿ ನೀಡಲು ಸಭೆಯು ಅನುಮೋದನೆಯನ್ನು ನೀಡಿತು.** |
| ವಿಷಯ 08 | ವಿಷಯ ಮತ್ತು ಟಿಪ್ಪಣಿ | **ಮಹಿಳಾ ದೌರ್ಜನ್ಯ ತಡೆ ಸಮಿತಿಗೆ ಸದಸ್ಯರನ್ನು ನೇಮಿಸುವ ಬಗೆಗೆ.**<br>ಪ್ರಶಾಸನ ಸಮಿತಿ 28ನೇ ಸಭೆಯ ಒಪ್ಪಿಗೆಯಂತೆ 'ಮಹಿಳಾ ದೌರ್ಜನ್ಯ ತಡೆ ಸಮಿತಿ'ಯನ್ನು ಪುನಾರಚಿಸಲಾಗಿದ್ದು, ಸಮಿತಿಯ ಸದಸ್ಯರನ್ನಾಗಿ ಪ್ರಶಾಸನ ಸಮಿತಿ ಸದಸ್ಯರಾದ ಡಾ. ವನಿತಾ ರಾಮಸ್ವಾಮಿ ಅವರನ್ನು ಹಿಂದೆ ನೇಮಿಸಲಾಗಿತ್ತು. ಡಾ. ವನಿತಾ ರಾಮಸ್ವಾಮಿ ಅವರ ಪ್ರಶಾಸನ ಸಮಿತಿ ಸದಸ್ಯತ್ವವು ಮುಕ್ತಾಯವಾಗಿದೆ. ಕರ್ನಾಟಕ ರಾಜ್ಯಪಾಲರ ಸಚಿವಾಲಯದ ಅಧಿಸೂಚನೆ ಸಂಖ್ಯೆ: ಜಿಎಸ್ 2 ವಿಎಸ್ಎಂ 2017; ದಿನಾಂಕ: 22.04.2017ರಲ್ಲಿ ಶ್ರೀಮತಿ ಸುಜಾತಗೌಡ ಅವರನ್ನು ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ ಪ್ರಶಾಸನ ಸಮಿತಿ ಸದಸ್ಯರನ್ನಾಗಿ ಘನತೆವೆತ್ತ ರಾಜ್ಯಪಾಲರು ನಾಮನಿರ್ದೇಶನ ಮಾಡಿರುತ್ತಾರೆ. ಶ್ರೀಮತಿ ಸುಜಾತಗೌಡ ಅವರನ್ನು 'ಮಹಿಳಾ ದೌರ್ಜನ್ಯ ತಡೆ ಸಮಿತಿ' ಸದಸ್ಯರನ್ನಾಗಿ ನೇಮಕ ಮಾಡಿದ್ದು, ಪ್ರಶಾಸನ ಸಮಿತಿಯ ಅನುಮೋದನೆಗಾಗಿ ಮಂಡಿಸಿದೆ. |
| | ನಿರ್ಣಯ | **ಪ್ರಶಾಸನ ಸಮಿತಿ ಸದಸ್ಯರಾದ ಶ್ರೀಮತಿ ಸುಜಾತ ಗೌಡ ಅವರನ್ನು 'ಮಹಿಳಾ ದೌರ್ಜನ್ಯ ತಡೆ ಸಮಿತಿ' ಸದಸ್ಯರನ್ನಾಗಿ ನೇಮಕ ಮಾಡಿರುವುದಕ್ಕೆ ಸಭೆಯು ಅನುಮೋದನೆಯನ್ನು ನೀಡಿತು.** |
| ವಿಷಯ 09 | ವಿಷಯ ಮತ್ತು ಟಿಪ್ಪಣಿ | **ಸಂಸ್ಕೃತ ಶಿಕ್ಷಣ ನಿರ್ದೇಶನಾಲಯದ ಸ್ನಾತಕಪೂರ್ವ ದೀಕ್ಷಾಂತ ಸಮಾರೋಹ ನಡೆಸುವ ಬಗೆಗೆ.**<br>ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ ಅಡಿಯಲ್ಲಿ ಸ್ಥಾಪನೆಯಾದ ಸಂಸ್ಕೃತ ಶಿಕ್ಷಣ ನಿರ್ದೇಶನಾಲಯವು ಕರ್ನಾಟಕ ರಾಜ್ಯದ ಸ್ನಾತಕಪೂರ್ವ ಶಿಕ್ಷಣವನ್ನು ನಿರ್ವಹಿಸುತ್ತಿದ್ದು, 2016-17ನೇ ಸಾಲಿನ ಪ್ರಥಮಾ, |

| | | |
|---|---|---|
| | | ಕಾವ್ಯ ಹಾಗೂ ಸಾಹಿತ್ಯ ಪರೀಕ್ಷೆಗಳನ್ನು ಯಶಸ್ವಿಯಾಗಿ ನಡೆಸಿ, ಫಲಿತಾಂಶವನ್ನು ಪ್ರಕಟಿಸಿದೆ. ಈ ಪರೀಕ್ಷೆಗಳಲ್ಲಿ ವೈಶಿಷ್ಟ್ಯ ಶ್ರೇಣಿಯೊಂದಿಗೆ ಉತ್ತೀರ್ಣರಾದ ವಿದ್ಯಾರ್ಥಿಗಳನ್ನು ಅಭಿನಂದಿಸಲು ಮತ್ತು 2016–17ನೇ ಸಾಲಿನಲ್ಲಿ ಸೇವೆಯಿಂದ ನಿವೃತ್ತರಾದ ಸಂಸ್ಕೃತ ಪಾಠಶಾಲಾ ಶಿಕ್ಷಕರನ್ನು "ಸಂಸ್ಕೃತ ಸೇವಾ ಸನ್ಮಾನ"ದೊಂದಿಗೆ ಅಭಿನಂದಸಲು ಪ್ರತಿ ವರ್ಷದಂತೆ ಈ ವರ್ಷವೂ 'ಸ್ನಾತಕಪೂರ್ವ ದೀಕ್ಷಾಂತ ಸಮಾರೋಹ' ಕಾರ್ಯಕ್ರಮವನ್ನು 2017ರ ನವೆಂಬರ್ ತಿಂಗಳ ಕೊನೆಯ ವಾರದಲ್ಲಿ ನಡೆಸಲು ತೀರ್ಮಾನಿಸಿದೆ. ಈ ಕಾರ್ಯಕ್ರಮ ನಡೆಸಲು ಅಂದಾಜು ವೆಚ್ಚದ ಪಟ್ಟಿಯನ್ನು ಸಿದ್ಧಪಡಿಸಿದ್ದು, ರೂ. 3.40 ಲಕ್ಷ ವೆಚ್ಚವಾಗಬಹುದೆಂದು ಅಂದಾಜಿಸಲಾಗಿದೆ. ಪ್ರಶಾಸನ ಸಮಿತಿಯ ಅನುಮೋದನೆಗಾಗಿ ಮಂಡಿಸಿದೆ. |
| | ನಿರ್ಣಯ | **ಸಂಸ್ಕೃತ ಶಿಕ್ಷಣ ನಿರ್ದೇಶನಾಲಯದ ಸ್ನಾತಕಪೂರ್ವ ದೀಕ್ಷಾಂತ ಸಮಾರೋಹವನ್ನು ನಡೆಸಲು ಹಾಗೂ ಈ ಕಾರ್ಯಕ್ರಮಕ್ಕೆ ತಗಲುವ ಅಂದಾಜುವೆಚ್ಚದ ಮೊತ್ತಕ್ಕೆ ಸಭೆಯು ಒಪ್ಪಿಗೆಯನ್ನು ನೀಡಿತು.** |
| ವಿಷಯ 10 | ವಿಷಯ ಮತ್ತು ಟಿಪ್ಪಣಿ | **ಸಂಸ್ಕೃತ ಶಿಕ್ಷಣ ನಿರ್ದೇಶನಾಲಯದ 2017–18ನೇ ಸಾಲಿನ ವಲಯಮಟ್ಟ ಮತ್ತು ರಾಜ್ಯಮಟ್ಟದ ಸ್ಪರ್ಧೆಗಳನ್ನು ನಡೆಸಲು ಮತ್ತು ಅದಕ್ಕೆ ತಗಲುವ ಅಂದಾಜು ವೆಚ್ಚಕ್ಕೆ ಅನುಮತಿ ನೀಡುವ ಬಗೆಗೆ.**<br>2017–18ನೇ ಸಾಲಿನಲ್ಲಿ ಸಂಸ್ಕೃತ ಶಿಕ್ಷಣ ನಿರ್ದೇಶನಾಲಯವು ರಾಜ್ಯದ ಸಂಸ್ಕೃತ ಪಾಠಶಾಲೆಗಳಲ್ಲಿ ಅಧ್ಯಯನ ಮಾಡುತ್ತಿರುವ ವಿದ್ಯಾರ್ಥಿಗಳಿಗಾಗಿ 2017ನೇ ನವೆಂಬರ್ ತಿಂಗಳಿನಲ್ಲಿ ವಲಯಮಟ್ಟದ ಸ್ಪರ್ಧೆಗಳನ್ನು, ವಲಯಮಟ್ಟದಲ್ಲಿ ಆಯ್ಕೆಯಾದ ವಿದ್ಯಾರ್ಥಿಗಳಿಗೆ 2017ನೇ ಡಿಸೆಂಬರ್ ತಿಂಗಳಿನಲ್ಲಿ ರಾಜ್ಯಮಟ್ಟದ ಸ್ಪರ್ಧೆಗಳನ್ನು ನಡೆಸಲು ವಿಶ್ವವಿದ್ಯಾಲಯವು ನಿರ್ಣಯಿಸಿದೆ. ಈ ಸ್ಪರ್ಧೆಗಳನ್ನು ನಡೆಸಲು ರೂ. 3,50,000/–ಗಳು ವೆಚ್ಚವಾಗಬಹುದೆಂದು ಅಂದಾಜಿಸಲಾಗಿದೆ. ಪ್ರಶಾಸನ ಸಮಿತಿಯ ಅನುಮತಿಗಾಗಿ ವಿಷಯವನ್ನು ಮಂಡಿಸಿದೆ. |
| | ನಿರ್ಣಯ | **2017–18ನೇ ಸಾಲಿನ ವಲಯಮಟ್ಟ ಹಾಗೂ ರಾಜ್ಯಮಟ್ಟದ ಸ್ಪರ್ಧೆಗಳನ್ನು ನಡೆಸಲು ಹಾಗೂ ಈ ಸ್ಪರ್ಧೆಗಳ ಅಂದಾಜು ಮೊತ್ತಕ್ಕೆ ಸಭೆಯು ಒಪ್ಪಿಗೆಯನ್ನು ನೀಡಿತು.** |
| ವಿಷಯ 11 | ವಿಷಯ ಮತ್ತು ಟಿಪ್ಪಣಿ | **ಕುಲಸಚಿವರ ಬಳಕೆಗೆ ಹೊಸ ಕಾರನ್ನು ಖರೀದಿಸುವ ಬಗೆಗೆ.**<br>ಮಾನ್ಯ ಕುಲಪತಿಗಳ ಬಳಕೆಗಾಗಿ 2010ರಲ್ಲಿ ಹುಂಡ್ಯೈ ಸಂಸ್ಥೆಯ ವರ್ನಾ (VERNA CRDI VGT SX) ಕಾರನ್ನು ಖರೀದಿಸಲಾಗಿತ್ತು. ಈ ಕಾರು 1,60,000 ಕಿ.ಮೀ.ಗಳನ್ನು ಚಲಿಸಿ, ಈ ಕಾರಿನ ಎ.ಸಿ. ಹಾಗೂ ಇನ್ನಿತರ ಬಿಡಿಭಾಗಗಳು ರಿಪೇರಿಗೆ ಬರುತ್ತಿದ್ದುದರಿಂದ ಹಾಗೂ ಕುಲಪತಿಗಳು ರಾಜ್ಯವ್ಯಾಪಿ ಪ್ರವಾಸ ಮಾಡುವ ಹಿನ್ನೆಲೆಯಲ್ಲಿ, ಪ್ರಶಾಸನ ಸಮಿತಿ 27ನೇ ಸಭೆಯ ಒಪ್ಪಿಗೆಯಂತೆ ಮಾನ್ಯ ಕುಲಪತಿಗಳ ಬಳಕೆಗೆ ಹೊಸ ಟೊಯೊಟಾ ಇನ್ನೋವಾ (TOYOTO INNOVA 2.5/V(E-4) BSIV) ಕಾರನ್ನು 2015ರ ನವೆಂಬರ್ ತಿಂಗಳಿನಲ್ಲಿ ಖರೀದಿಸಲಾಗಿದೆ. ಈ ಹಿಂದೆ ಕುಲಪತಿಗಳು ಬಳಸುತ್ತಿದ್ದ ವರ್ನಾ ಕಾರನ್ನು ಕುಲಸಚಿವರ ಬಳಕೆಗೂ ಹಾಗೂ ಕುಲಸಚಿವರ ಬಳಕೆಗಾಗಿ 2012ರ ಫೆಬ್ರವರಿಯಲ್ಲಿ ಖರೀದಿಸಿದ್ದ ಟಾಟಾ ಇಂಡಿಗೋ (TATA INDIGO ECS VX 1.4L) ಕಾರನ್ನು ಹಣಕಾಸು ಅಧಿಕಾರಿಗಳ ಬಳಕೆಗೂ ನೀಡಲಾಗಿದೆ. ಪ್ರಸ್ತುತ ಕುಲಸಚಿವರು ಬಳಸುತ್ತಿರುವ ವರ್ನಾ ಕಾರು 2,12,500 ಕಿ.ಮೀ.ಗಳು ಹಣಕಾಸು ಅಧಿಕಾರಿಗಳು ಬಳಸುತ್ತಿರುವ ಇಂಡಿಗೋ ಕಾರು 1,02,000 ಕಿ.ಮೀ.ಗಳು ಚಲಿಸಿವೆ. ಈ ಎರಡೂ ಕಾರುಗಳು ಹಳೆಯವಾಗಿರುವುದರಿಂದ, ಇವುಗಳ ನಿರ್ವಹಣೆಗೆ ಹೆಚ್ಚಿನ ಹಣ ವ್ಯಯವಾಗುತ್ತಿದೆ. ಈ ಹಿನ್ನೆಲೆಯಲ್ಲಿ, ಎರಡೂ ಕಾರುಗಳ ನಿರ್ವಹಣೆ ಹಾಗೂ ಸಾಮರ್ಥ್ಯದ ಬಗೆಗೆ ಪ್ರಾದೇಶಿಕ ಸಾರಿಗೆ ಅಧಿಕಾರಿಗಳಿಂದ ವರದಿಯನ್ನು ಪಡೆದು, ಎರಡರಲ್ಲಿ ಒಂದು ಕಾರನ್ನು ಮಾರಾಟ ಮಾಡಬಹುದಾಗಿದೆ. ಕಾರಿನ ಮಾರಾಟದ ಮೊತ್ತವನ್ನು ಒಳಗೊಂಡಂತೆ ಸರ್ಕಾರಿ ನಿಯಮಗಳನುಸಾರ ಕುಲಸಚಿವರ ಬಳಕೆಗಾಗಿ ಹೊಸ ಕಾರನ್ನು ಖರೀದಿಸಬಹುದಾಗಿದೆ. ಮುಂದಿನ ಕ್ರಮ ವಹಿಸಲು ಪ್ರಶಾಸನ ಸಮಿತಿಯ ಅನುಮೋದನೆಗಾಗಿ ವಿಷಯವನ್ನು ಮಂಡಿಸಿದೆ. |
| | ನಿರ್ಣಯ | **ಸಭೆಯು ಎಲ್ಲ ವಿವರಗಳನ್ನು ಪರಿಶೀಲಿಸಿತು. ಸರ್ಕಾರದಿಂದ ಪೂರ್ವಾನುಮತಿಯನ್ನು ಪಡೆದು, ಆನಂತರ ನಿಯಮಾನುಸಾರ ಹೊಸ ಕಾರನ್ನು ಖರೀದಿಸಬಹುದೆಂದು ಸಭೆಯು ನಿರ್ಣಯಿಸಿತು.** |
| ವಿಷಯ 12 | ವಿಷಯ ಮತ್ತು ಟಿಪ್ಪಣಿ | **ಮಹಮದ್ ಮುದಾಸಿರ್, ಗ್ರೂಪ್ ಡಿ (ಕಾವಲುಗಾರ) –ಇವರ ವಿರುದ್ಧ ಸೂಕ್ತಕ್ರಮ ಜರುಗಿಸುವ ಬಗೆಗೆ.**<br>ಮಹಮದ್ ಮುದಾಸಿರ್ –ಇವರು ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ ಗ್ರೂಪ್ ಡಿ (ಕಾವಲುಗಾರ) ಹುದ್ದೆಯ ಕರ್ತವ್ಯಕ್ಕೆ ದಿನಾಂಕ: 09.09.2015ರಂದು ವರದಿ ಮಾಡಿಕೊಂಡಿದ್ದು, ತಮ್ಮ ಸೇವಾವಧಿಯಲ್ಲಿ ಯಾವುದೇ ಪೂರ್ವಾನುಮತಿ ಪಡೆಯದೇ ಅಥವಾ ರಜೆ ಮಂಜೂರಾತಿ ಪಡೆಯದೆ, ಅನಧಿಕೃತ ಗೈರುಹಾಜರಿ ಬಗ್ಗೆ ಹಲವಾರು ಬಾರಿ ನೋಟೀಸ್‌ಗಳನ್ನು ನೀಡಿದ್ದರೂ ಒಟ್ಟು 142 ದಿನಗಳ ಕಾಲ |

| | | |
|---|---|---|
| | | ಕರ್ತವ್ಯಕ್ಕೆ ಅನಧಿಕೃತವಾಗಿ ಗೈರುಹಾಜರಾಗಿರುತ್ತಾರೆ. ಈ ಹಿನ್ನೆಲೆಯಲ್ಲಿ, ಇವರ ವಿರುದ್ಧ ಸೂಕ್ತಕ್ರಮಕ್ಕಾಗಿ ದಿನಾಂಕ: 05.07.2016ರಂದು ನಡೆದ ಪ್ರಶಾಸನ ಸಮಿತಿ 33ನೇ ಸಭೆಯಲ್ಲಿ ಮಂಡಿಸಲಾಗಿತ್ತು. ಪ್ರಶಾಸನ ಸಮಿತಿಯ ನಿರ್ಣಯದಂತೆ, ಸದರಿ ಸಿಬ್ಬಂದಿಗೆ ಎಚ್ಚರಿಕೆ ನೋಟೀಸನ್ನು ನೀಡಿ, ಇನ್ನುಮುಂದೆ ಅನಧಿಕೃತ ಗೈರುಹಾಜರಿ ಆಗುವುದಿಲ್ಲ ಎಂದು ಇ-ಸ್ಟಾಂಪ್ ಪತ್ರದಲ್ಲಿ ಮುಚ್ಚಳಿಕೆಯನ್ನೂ ಬರೆಸಿಕೊಳ್ಳಲಾಗಿದೆ. ಆದರೂ ಸದರಿ ಸಿಬ್ಬಂದಿಯು ತಮ್ಮ ವರ್ತನೆಯನ್ನು ಪುನರಾವರ್ತಿಸಿ, ದಿನಾಂಕ: 25.06.2016ರಿಂದ 26.11.2016ರ ಅವಧಿಯಲ್ಲಿ 35 ದಿನಗಳು ಹಾಗೂ 03.03.2017ರಿಂದ 09.10.2017ರ ವರೆಗೆ 59 ದಿನಗಳ ಕಾಲ; ಒಟ್ಟು 94 ದಿನಗಳು ಗೈರುಹಾಜರಾಗಿದ್ದಾರೆ. ಹೀಗೆ, ಸದರಿ ಸಿಬ್ಬಂದಿಯು ತಮ್ಮ ಈವರೆಗಿನ ಸೇವಾವಧಿಯಲ್ಲಿ ಒಟ್ಟು 236 ದಿನಗಳ ಕಾಲ ಅನಧಿಕೃತ ಗೈರುಹಾಜರಿಯಾಗಿರುತ್ತಾರೆ. ಈ ಹಿನ್ನೆಲೆಯಲ್ಲಿ ಮಹಮದ್ ಮುದಾಸಿರ್, ಗ್ರೂಪ್ ಡಿ (ಕಾವಲುಗಾರ) -ಇವರ ವಿರುದ್ಧ ನಿಯಮಾನುಸಾರ ಶಿಸ್ತುಕ್ರಮ ಜರುಗಿಸಲು ಪ್ರಶಾಸನ ಸಮಿತಿಯ ಅನುಮೋದನೆಗಾಗಿ ಮಂಡಿಸಿದೆ. |
| | ನಿರ್ಣಯ | **ಸಭೆಯು ವಿವರಗಳನ್ನು ಪರಿಶೀಲಿಸಿತು. ಅಂತಿಮವಾಗಿ ಕರ್ತವ್ಯದಿಂದ ಬಿಡುಗಡೆಗೊಳಿಸುವ ಬಗ್ಗೆ ಸಂಬಂಧಪಟ್ಟ ನೌಕರರಿಗೆ ಕೊನೆಯ ಅವಕಾಶ ಕಲ್ಪಿಸಿ ನೋಟೀಸ್ ನೀಡುವುದಕ್ಕೆ ಸಭೆಯು ಕುಲಸಚಿವರಿಗೆ ನಿರ್ದೇಶನ ನೀಡಿತು.** |
| ವಿಷಯ 13 | ವಿಷಯ ಮತ್ತು ಟಿಪ್ಪಣಿ | **ಅನುದಾನರಹಿತ ಸಂಸ್ಕೃತ ಪಾಠಶಾಲೆಗಳಿಗೆ ಮಾನ್ಯತೆಯನ್ನು ನೀಡುವ ಬಗೆಗೆ.**<br>ಸಂಸ್ಕೃತ ಶಿಕ್ಷಣ ನಿರ್ದೇಶನಾಲಯದ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ 11 ಅನುದಾನರಹಿತ ಸಂಸ್ಕೃತ ಪಾಠಶಾಲೆಗಳಿಗೆ ಮಾನ್ಯತೆಯನ್ನು ನೀಡುವಂತೆ ಆಯಾ ಪಾಠಶಾಲೆಗಳ ಆಡಳಿತ ಮಂಡಳಿಯವರು ಸಂಸ್ಕೃತ ಶಿಕ್ಷಣ ನಿರ್ದೇಶನಾಲಯಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ. ಪಾಠಶಾಲೆಗಳ ವಿವರವನ್ನು ಲಗತ್ತಿಸಿದೆ. ಈ ಪಾಠಶಾಲೆಗಳಿಗೆ ಅನುದಾನರಹಿತವಾಗಿ ನಿಯಮಾನುಸಾರ ಮಾನ್ಯತೆಯನ್ನು ನೀಡಲು ಪ್ರಶಾಸನ ಸಮಿತಿಯ ಅನುಮೋದನೆಗಾಗಿ ಸಭೆಯಲ್ಲಿ ಮಂಡಿಸಿದೆ. |
| | ನಿರ್ಣಯ | **ಮಾನ್ಯತೆಗಾಗಿ ಪ್ರಸ್ತಾವನೆಯಲ್ಲಿಸಿರುವ ಅನುದಾನರಹಿತ ಪಾಠಶಾಲೆಗಳ ವಿವರಗಳನ್ನು ಸಭೆಯು ಪರಿಶೀಲಿಸಿತು. ಈ ಪಾಠಶಾಲೆಗಳಿಗೆ ಮಾನ್ಯತೆ ನೀಡುವುದನ್ನೂ ಸೇರಿದಂತೆ ಅನುದಾನಿತ ಪಾಠಶಾಲೆಗಳನ್ನು ಪರಿಶೀಲಿಸಿ ವರದಿ ಸಲ್ಲಿಸುವುದಕ್ಕೆ ಸಂಬಂಧಿಸಿದಂತೆ ಪ್ರಶಾಸನ ಸಮಿತಿ ಸದಸ್ಯರಾದ ಶ್ರೀ ಪರಪ್ಪ ಬಸಪ್ಪ ಬಾವಲತ್ತಿ ಅವರನ್ನು ಅಧ್ಯಕ್ಷರನ್ನಾಗಿ ಹಾಗೂ ಶ್ರೀಮತಿ ಜಯಶ್ರೀ ವಿ. ಕೊರತಿ ಮತ್ತು ಶ್ರೀಮತಿ ಸುಜಾತಗೌಡ ಅವರನ್ನು ಸದಸ್ಯರನ್ನಾಗಿ ಮಾಡಿ 'ತ್ರಿಸದಸ್ಯ ಸಮಿತಿ'ಯನ್ನು ರಚಿಸಲು ಸೂಚಿಸಿತು. ಈ ತ್ರಿಸದಸ್ಯ ಸಮಿತಿಯು ಪಾಠಶಾಲೆಗಳಿಗೆ ಭೇಟಿ ನೀಡಿ, ತಪಾಸಣೆ ನಡೆಸಿ 3 ತಿಂಗಳ ಒಳಗಾಗಿ ವರದಿಯನ್ನು ವಿಶ್ವವಿದ್ಯಾಲಯಕ್ಕೆ ಸಲ್ಲಿಸುವಂತೆ ಹಾಗೂ ಆನಂತರದಲ್ಲಿ ಪಾಠಶಾಲೆಗಳಿಗೆ ಮಾನ್ಯತೆ ನೀಡಲು ಕ್ರಮವಹಿಸುವಂತೆ ಸಭೆಯು ನಿರ್ಣಯಿಸಿತು.** |
| ವಿಷಯ 14 | ವಿಷಯ ಮತ್ತು ಟಿಪ್ಪಣಿ | **ವಿಶೇಷ ಘಟಕ ಯೋಜನೆ/ಗಿರಿಜನ ಉಪಯೋಜನೆ ಅಡಿಯಲ್ಲಿ ಬಿಡುಗಡೆಯಾಗಿರುವ ಅನುದಾನವನ್ನು ಬಳಸಿಕೊಂಡು ಘಟಕ ಕಾಲೇಜುಗಳ ಆವರಣದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿನಿಲಯಗಳನ್ನು ನಿರ್ಮಿಸುವ ಬಗೆಗೆ.**<br>ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯಕ್ಕೆ ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪಯೋಜನೆ (ಎಸ್‌ಸಿಪಿ/ಟಿಎಸ್‌ಪಿ) ಅಡಿಯಲ್ಲಿ 2012-13, 2013-14 ಮತ್ತು 2014-15ನೇ ಸಾಲಿನಲ್ಲಿ ಸರ್ಕಾರದಿಂದ ಅನುದಾನವು ಬಿಡುಗಡೆಯಾಗಿರುವ ಅನುದಾನದ ಮೊತ್ತವನ್ನು ಬಳಸಿಕೊಂಡು ವಿಶ್ವವಿದ್ಯಾಲಯದ ಘಟಕ ಕಾಲೇಜುಗಳಾದ ಶ್ರೀ ಚಾಮರಾಜೇಂದ್ರ ಸಂಸ್ಕೃತ ಕಾಲೇಜು, ಬೆಂಗಳೂರು ಮತ್ತು ಶ್ರೀಮನ್ಮಹಾರಾಜ ಸಂಸ್ಕೃತ ಕಾಲೇಜು, ಮೈಸೂರು -ಈ ಎರಡೂ ಕಾಲೇಜುಗಳ ಆವರಣಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗಾಗಿ ನೂತನ ವಿದ್ಯಾರ್ಥಿನಿಲಯಗಳನ್ನು ನಿರ್ಮಿಸಲು ದಿನಾಂಕ: 11.08.2017ರಂದು ನಡೆದ ಕಟ್ಟಡ ಸಲಹಾ ಸಮಿತಿ ಸಭೆಯು ನಿರ್ಣಯಿಸಿದ್ದು, ಕಟ್ಟಡ ಸಲಹಾ ಸಮಿತಿ ಸಭೆಯ ನಡಾವಳಿಯನ್ನು ಅನುಮೋದನೆಗಾಗಿ ದಿನಾಂಕ: 19.08.2017ರಂದು ನಡೆದ ಪ್ರಶಾಸನ ಸಮಿತಿ 39ನೇ ಸಭೆಯಲ್ಲಿ ಮಂಡಿಸಲಾಗಿತ್ತು. ಅಲ್ಲದೇ, ಶ್ರೀ ಚಾಮರಾಜೇಂದ್ರ ಸಂಸ್ಕೃತ ಕಾಲೇಜಿನ ವಿದ್ಯಾರ್ಥಿನಿಲಯದಲ್ಲಿ 2017-18ನೇ ಸಾಲಿಗೆ ಪ್ರವೇಶ ಪಡೆದಿರುವ ವಿದ್ಯಾರ್ಥಿಗಳಿಗೆ ಹೊಸ ವಿದ್ಯಾರ್ಥಿನಿಲಯದ ಕಟ್ಟಡ ನಿರ್ಮಾಣವಾಗುವವರೆಗೆ, ಅಂದರೆ ಸುಮಾರು ಎಂಟು ತಿಂಗಳುಗಳವರೆಗೆ ತಾತ್ಕಾಲಿಕವಾಗಿ ಪರ್ಯಾಯ ವ್ಯವಸ್ಥೆಯನ್ನು ಮಾಡಲು ಅನುಮೋದನೆಯನ್ನು ಕೋರಲಾಗಿತ್ತು. ಪ್ರಶಾಸನ ಸಮಿತಿ 39ನೇ ಸಭೆಯಲ್ಲಿ ಭಾಗವಹಿಸಿದ್ದ ಸದಸ್ಯರು ಮೇಲಿನ ಎರಡೂ ವಿಷಯಗಳಿಗೆ ಅನುಮೋದನೆಯನ್ನು ನೀಡಿರುತ್ತಾರೆ. ಆದರೆ, ಸಭೆಯಲ್ಲಿ ಗೈರುಹಾಜರಾಗಿದ್ದ ಸದಸ್ಯರುಗಳಾದ ವಿದ್ವಾನ್ ಜಿ.ಎಲ್. ಭಟ್ಟ, ಪ್ರೊ. ಮೈಕೆಲ್, ವಿದ್ವಾನ್ ಕೆ. ಭೀಮಪ್ಪ, ಶ್ರೀ ಪರಪ್ಪ ಬಸಪ್ಪ ಬಾವಲತ್ತಿ ಹಾಗೂ ಶ್ರೀಮತಿ ಜಯಶ್ರೀ ವಿ. ಕೊರತಿ -ಇವರು ಈ ವಿಷಯಗಳಿಗೆ ಸಂಬಂಧಿಸಿದಂತೆ ಪತ್ರಮುಖೇನ ಆಕ್ಷೇಪಣೆಗಳನ್ನು |

| | | |
|---|---|---|
| | | ಸಲ್ಲಿಸಿದ್ದರು. ಇವರುಗಳ ಆಕ್ಷೇಪಣೆಗಳಿಗೆ ಈಗಾಗಲೇ ಉತ್ತರಗಳನ್ನು ನೀಡಲಾಗಿದೆ.<br>ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪಯೋಜನೆ ಅನುದಾನವನ್ನು ಬಳಸಿಕೊಂಡು ಘಟಕ ಕಾಲೇಜುಗಳ ಆವರಣಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗಾಗಿ ನೂತನ ವಿದ್ಯಾರ್ಥಿನಿಲಯಗಳನ್ನು ನಿರ್ಮಿಸಲು ಪ್ರಶಾಸನ ಸಮಿತಿಯ ಅನುಮೋದನೆಗಾಗಿ ಮತ್ತೊಮ್ಮೆ ಮಂಡಿಸಲಾಗಿದೆ. |
| | ನಿರ್ಣಯ | **ಸಭೆಯು ವಿವರಗಳನ್ನು ಪರಿಶೀಲಿಸಿತು. ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯಕ್ಕೆ ವಿಶೇಷ ಘಟಕ ಯೋಜನೆ/ ಗಿರಿಜನ ಉಪಯೋಜನೆ ಅಡಿಯಲ್ಲಿ ಬಿಡುಗಡೆಯಾಗಿರುವ ಅನುದಾನವನ್ನು ಬಳಸಿಕೊಂಡು ಘಟಕ ಕಾಲೇಜುಗಳ ಆವರಣಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಹೊಸದಾಗಿ ವಿದ್ಯಾರ್ಥಿನಿಲಯಗಳನ್ನು ನಿರ್ಮಿಸಲು ಹಾಗೂ ಶ್ರೀ ಚಾಮರಾಜೇಂದ್ರ ಸಂಸ್ಕೃತ ಕಾಲೇಜಿನ ವಿದ್ಯಾರ್ಥಿನಿಲಯದ ವಿದ್ಯಾರ್ಥಿಗಳಿಗೆ ತಾತ್ಕಾಲಿಕವಾಗಿ ಪರ್ಯಾಯ ವ್ಯವಸ್ಥೆಯನ್ನು ಕಲ್ಪಿಸಲು ಸಭೆಯು ತನ್ನ ಒಪ್ಪಿಗೆಯನ್ನು ನೀಡಿತು.** |
| **ಅಧ್ಯಕ್ಷರ ಅಪ್ಪಣೆ ಮೇರೆಗೆ ಇತರೆ ವಿಷಯಗಳು** | | |
| ವಿಷಯ 01 | ವಿಷಯ ಮತ್ತು ಟಿಪ್ಪಣಿ | **ಶ್ರೀ ಸಿದ್ಧಗಂಗಾ ವಿದ್ಯಾಸಂಸ್ಥೆ (ರಿ.), ಶ್ರೀ ಸಿದ್ಧಗಂಗಾಮಠ, ತುಮಕೂರು ಇದರ ಆಶ್ರಯದಲ್ಲಿ ನಡೆಯುತ್ತಿರುವ ಶ್ರೀ ಉದ್ಧಾನೇಶ್ವರ ವೇದ-ಸಂಸ್ಕೃತ ಪಾಠಶಾಲೆ ಹಾಗೂ ಶ್ರೀ ಶಿವಕುಮಾರಸ್ವಾಮೀಜಿ ವೇದ-ಸಂಸ್ಕೃತ ಪಾಠಶಾಲೆ -ಪಾಠಶಾಲೆಗಳಿಗೆ ಸಹಶಿಕ್ಷಕರ ಹುದ್ದೆಗಳನ್ನು ಸೃಜಿಸಿ ಅನುದಾನಕ್ಕೆ ಒಳಪಡಿಸುವ ಬಗೆಗೆ.**<br>1917ರಲ್ಲಿ ಪ್ರಾರಂಭವಾದ ಶ್ರೀ ಸಿದ್ಧಲಿಂಗೇಶ್ವರ ವೇದ-ಸಂಸ್ಕೃತ ಪಾಠಶಾಲೆಯು 1939ರಲ್ಲಿ ಕಾಲೇಜಾಗಿ ಪರಿವರ್ತನೆಗೊಂಡು ನಿರಂತರವಾಗಿ ನಡೆಯುತ್ತಾ ಬಂದಿದೆ. ಸದರಿ ಸಂಸ್ಕೃತ ಕಾಲೇಜು ಅನುದಾನಿತ ಸಂಸ್ಕೃತ ಕಾಲೇಜಾಗಿದ್ದು, ಸರ್ಕಾರಿ ಆದೇಶ ಸಂಖ್ಯೆ: ಇಡಿ29.ಜಿಎಸ್‌ಬಿ69, ಬೆಂಗಳೂರು. ದಿನಾಂಕ: 10.10.1972ರಲ್ಲಿ ಕಾಲೇಜಿಗೆ 100% ಅನುದಾನವನ್ನು ನೀಡಿ ಸಂಸ್ಕೃತಾಧ್ಯಯನಕ್ಕೆ ಪೂರ್ಣಪ್ರಮಾಣದಲ್ಲಿ ಪ್ರೋತ್ಸಾಹಿಸಿದೆ. ಸರ್ಕಾರಿ ಆದೇಶ ಸಂಖ್ಯೆ: ಇಡಿ43ಜಿಎಸ್‌ಇ71. ಬೆಂಗಳೂರು. ದಿನಾಂಕ: 20.07.1973ರಲ್ಲಿ ಅನುದಾನಿತವಾಗಿ 26 ಹುದ್ದೆಗಳು ಮಂಜೂರಾಗಿವೆ. ವಿದ್ಯಾರ್ಥಿಗಳ ಸಂಖ್ಯೆ ಅಧಿಕವಾದ್ದರಿಂದ ಸರ್ಕಾರಿ ಆದೇಶ ಸಂಖ್ಯೆ: ಎಸ್‌ಕೆಟಿಬಿಪಿಸಿ.8:76-77. ದಿನಾಂಕ: 15.05.1980ರಂದು 14 ಹುದ್ದೆಗಳನ್ನು ಹೊಸದಾಗಿ ಮಂಜೂರು ಮಾಡಿರುತ್ತಾರೆ. ಈ ಎರಡು ಆದೇಶಗಳಲ್ಲಿ ಮಂಜೂರಾದ 40 ಹುದ್ದೆಗಳಲ್ಲಿ 15 ಮಂದಿ ಸಹಶಿಕ್ಷಕರನ್ನು ತುಂಬಿಕೊಳ್ಳಲು ಆದೇಶವನ್ನು ನೀಡಿದೆ. ಸರ್ಕಾರಿ ಆದೇಶ ಸಂಖ್ಯೆ: ಇಡಿ154. ಯುಪಿಸಿ.2009 ಬೆಂಗಳೂರು. ದಿನಾಂಕ: 25.01.2011ರಲ್ಲಿ ಹೆಚ್ಚುವರಿಯಾಗಿ 25 ಸಂಸ್ಕೃತ ಸಹಶಿಕ್ಷಕರ ಹುದ್ದೆಗಳನ್ನು ಮಂಜೂರು ಮಾಡಿ ಆದೇಶ ನೀಡಿರುತ್ತದೆ.<br>ಈ ಸಂಸ್ಕೃತ ಕಾಲೇಜಿನಲ್ಲಿ ಪಾಠಶಾಲಾ ಹಂತದಲ್ಲಿಯೇ ಆರು ಸಾವಿರಕ್ಕಿಂತಲೂ ಹೆಚ್ಚು ವಿದ್ಯಾರ್ಥಿಗಳು ಸಂಸ್ಕೃತ ಅಧ್ಯಯನ ಮಾಡುತ್ತಿದ್ದುರಿಂದ, ಆಡಳಿತ ಮತ್ತು ಶೈಕ್ಷಣಿಕ ಹಿತದೃಷ್ಟಿಯಿಂದ ಸಂಯುಕ್ತಗೊಂಡ ಕಾಲೇಜಿನಿಂದ ಸಂಸ್ಕೃತ ಪ್ರಥಮಾ, ಕಾವ್ಯ, ಸಾಹಿತ್ಯ ಹಾಗೂ ವೇದ ಪ್ರಥಮಾ, ವೇದ ಪ್ರವೇಶ ಮತ್ತು ವೇದಮೂಲ ತರಗತಿಗಳನ್ನು ಶ್ರೀ ಉದ್ಧಾನೇಶ್ವರ ವೇದ-ಸಂಸ್ಕೃತ ಪಾಠಶಾಲೆ, ಶ್ರೀ ಸಿದ್ಧಗಂಗಾಮಠ, ಹಾಗೂ ಶ್ರೀ ಶಿವಕುಮಾರಸ್ವಾಮೀಜಿ ವೇದ-ಸಂಸ್ಕೃತ ಪಾಠಶಾಲೆ, ಶ್ರೀ ಸಿದ್ಧಗಂಗಾಮಠ - ಹೆಸರಿನಲ್ಲಿ ಎರಡು ಸಂಸ್ಕೃತ ಪಾಠಶಾಲೆಗಳನ್ನಾಗಿ ಬೇರ್ಪಡಿಸಲು ಸಂಸ್ಕೃತ ಶಿಕ್ಷಣ ನಿರ್ದೇಶನಾಲಯವು ಸಂಖ್ಯೆ: ಕಸಂವಿ: ಸಂಶನಿ.02/2012-13; ದಿನಾಂಕ: 10.06.2013ರ ಅನ್ವಯ ಅನುಮತಿಯನ್ನು ನೀಡಿರುತ್ತಾರೆ.<br>ಈ ಎರಡು ಪಾಠಶಾಲೆಗಳಲ್ಲಿ ಒಟ್ಟು 103 ವಿಭಾಗಗಳಿಂದ 5188 ವಿದ್ಯಾರ್ಥಿಗಳು ಸಂಸ್ಕೃತ ಅಧ್ಯಯನ ಮಾಡುತ್ತಿದ್ದಾರೆ. 1.5 ವಿಭಾಗಕ್ಕೆ ಓರ್ವ ಸಹಶಿಕ್ಷಕರ ಅವಕಾಶವಿದ್ದು, ಅದರಂತೆ ಎರಡೂ ಪಾಠಶಾಲೆಗಳ ಒಟ್ಟು 103 ವಿಭಾಗಗಳಿಗೆ 69 ಸಹಶಿಕ್ಷಕರ ಅವಶ್ಯಕತೆ ಇದೆ. ಪ್ರಸ್ತುತ ಸರ್ಕಾರದಿಂದ 40 ಮಂದಿ ಬೋಧಕ ಶಿಕ್ಷಕರು ವೇತನಾನುದಾನ ಪಡೆಯುತ್ತಿದ್ದಾರೆ. ಇನ್ನುಳಿದಂತೆ 29 ಸಹಶಿಕ್ಷಕರ ಹುದ್ದೆಗಳನ್ನು ಸೃಜಿಸುವುದಕ್ಕೆ ಸಂಬಂಧಿಸಿದಂತೆ ಈ ಪಾಠಶಾಲೆಗಳಿಗೆ ಭೇಟಿ ನೀಡಿ ಪರಿಶೀಲಿಸಿದ ತ್ರಿಸದಸ್ಯ ಸಮಿತಿ ತಪಾಸಣಾ ವರದಿಯ ಶಿಫಾರಸ್ಸಿನ ಅನ್ವಯ, ಹೊಸದಾಗಿ 29 ಸಹಶಿಕ್ಷಕ ಹುದ್ದೆಗಳನ್ನು ಸೃಜಿಸಿ, ಅನುದಾನಕ್ಕೆ ಒಳಪಡಿಸಲು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಬೇಕಾಗಿದೆ. ಈ ವಿಷಯಕ್ಕೆ ಪ್ರಶಾಸನ ಸಮಿತಿಯ ಅನುಮೋದನೆಗಾಗಿ ಮಂಡಿಸಿದೆ. |
| | ನಿರ್ಣಯ | **ಶ್ರೀ ಉದ್ಧಾನೇಶ್ವರ ವೇದ-ಸಂಸ್ಕೃತ ಪಾಠಶಾಲೆ ಹಾಗೂ ಶ್ರೀ ಶಿವಕುಮಾರಸ್ವಾಮೀಜಿ ವೇದ-ಸಂಸ್ಕೃತ ಪಾಠಶಾಲೆ - ಪಾಠಶಾಲೆಗಳಿಗೆ ಹೊಸದಾಗಿ ಸಹಶಿಕ್ಷಕರ ಹುದ್ದೆಗಳನ್ನು ಸೃಜಿಸಿ ವೇತನಾನುದಾನಕ್ಕೆ ಒಳಪಡಿಸುವ ಸಂಬಂಧ ನಿಯಮಾನುಸಾರ ಕ್ರಮವಹಿಸಿ, ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲು ಸಭೆಯು ಅನುಮೋದನೆಯನ್ನು ನೀಡಿತು.** |

**ವಿಷಯ 02**

**ವಿಷಯ ಮತ್ತು ಟಿಪ್ಪಣಿ**

**2017–18ನೇ ಸಾಲಿನಲ್ಲಿ ನಡೆಸಿದ 'ಸಂಸ್ಕೃತ ನಾಟಕೋತ್ಸವ'ದ ವೆಚ್ಚಕ್ಕೆ ಅನುಮೋದನೆ ನೀಡುವ ಬಗೆಗೆ.**

ಸಂಸ್ಕೃತ ಮಾಸಾಚರಣೆಯ ಹಿನ್ನೆಲೆಯಲ್ಲಿ, 2017ನೇ ಆಗಸ್ಟ್ 17–18ರಂದು ಧಾರವಾಡದಲ್ಲಿ 'ಸಂಸ್ಕೃತ ನಾಟಕೋತ್ಸವ'ವನ್ನು ಯಶಸ್ವಿಯಾಗಿ ನಡೆಸಲಾಯಿತು. ಈ ನಾಟಕೋತ್ಸವವನ್ನು ನಡೆಸಲು ರೂ. 4.00 ಲಕ್ಷಗಳ ಅಂದಾಜುವೆಚ್ಚಕ್ಕೆ ದಿನಾಂಕ: 01.06.2017ರಂದು ನಡೆದ ಪ್ರಶಾಸನ ಸಮಿತಿ 38ನೇ ಸಭೆಯ ಅನುಮೋದನೆಯನ್ನು ಪಡೆಯಲಾಗಿತ್ತು. ಈ ನಾಟಕೋತ್ಸವದಲ್ಲಿ ರಾಜ್ಯದ 11 ಸಂಸ್ಕೃತ ಕಾಲೇಜುಗಳ ವಿದ್ಯಾರ್ಥಿಗಳು ಭಾಗವಹಿಸಿದ್ದರು. 'ಸಂಸ್ಕೃತ ನಾಟಕೋತ್ಸವ–2017'ಕ್ಕೆ ಒಟ್ಟಾರೆ ರೂ. 4.00 ಲಕ್ಷಗಳು ಖರ್ಚಾಗಿದ್ದು, ಈ ಮೊತ್ತಕ್ಕೆ ಪ್ರಶಾಸನ ಸಮಿತಿಯ ಅನುಮೋದನೆಗಾಗಿ ಮಂಡಿಸಿದೆ.

**ನಿರ್ಣಯ**

**'ಸಂಸ್ಕೃತ ನಾಟಕೋತ್ಸವ–2017'ಕ್ಕೆ ತಗುಲಿದ ವೆಚ್ಚದ ಒಟ್ಟು ಮೊತ್ತ ರೂ. 4.00 ಲಕ್ಷಗಳಿಗೆ ಸಭೆಯು ಅನುಮೋದನೆಯನ್ನು ನೀಡಿತು.**

**ವಿಷಯ 03**

**ವಿಷಯ ಮತ್ತು ಟಿಪ್ಪಣಿ**

**ಹೈದರಾಬಾದ್–ಕರ್ನಾಟಕ ಪ್ರದೇಶದವರಿಗೆ ಮೀಸಲಿರಿಸಿದ ರಾಜ್ಯ ವೇತನಶ್ರೇಣಿಯ ಬೋಧಕೇತರ ಹುದ್ದೆಗಳ ನೇಮಕಾತಿಯನ್ನು ಅನುಮೋದಿಸುವ ಬಗೆಗೆ.**

ಸರ್ಕಾರದ ಪತ್ರ ಸಂಖ್ಯೆ: ಇಡಿ 572 ಯುಎನ್‌ಇ 2014; ದಿನಾಂಕ: 27.09.2017ರ ಸೂಚನೆಯಂತೆ, ಅಧಿಸೂಚನೆ ಸಂಖ್ಯೆ: ಕಸಂವಿ/ಕ.ರಾ.ವೇ/ಬೋಧಕ ಬೋಧಕೇತರ ಹುದ್ದೆ ನೇ 17/2016–17; ದಿನಾಂಕ: 03.02.2017ರಲ್ಲಿ ಹೈದರಾಬಾದ್–ಕರ್ನಾಟಕ ಪ್ರದೇಶದ ಅಭ್ಯರ್ಥಿಗಳಿಗೆ ಮೀಸಲಿರಿಸಿದ್ದ ಹುದ್ದೆಗಳಿಗೆ ಅರ್ಜಿ ಸಲ್ಲಿಸಿದ್ದ ಅರ್ಹ ಅಭ್ಯರ್ಥಿಗಳಿಗೆ ದಿನಾಂಕ: 25.10.2017ರಂದು ಲಿಖಿತ ಪರೀಕ್ಷೆ ಹಾಗೂ ಸಂದರ್ಶನವನ್ನು ನಡೆಸಲಾಯಿತು. ಆಯ್ಕೆ ಸಮಿತಿಯ ಶಿಫಾರಸ್ಸಿನ ಅನ್ವಯ ಆಯಾ ಹುದ್ದೆಗಳಿಗೆ ಆಯ್ಕೆ ಆಗಿರುವ ಅಭ್ಯರ್ಥಿಗಳನ್ನು ನೇಮಕಾತಿ ಮಾಡಿಕೊಳ್ಳಲು ಪ್ರಶಾಸನ ಸಮಿತಿಯ ಅನುಮೋದನೆಗಾಗಿ ಮಂಡಿಸಿದೆ.

**ನಿರ್ಣಯ**

ರಾಜ್ಯ ವೇತನಶ್ರೇಣಿಯ ಬೋಧಕೇತರ ಸಹಾಯಕ ನಿರ್ದೇಶಕರು (ಪ್ರಸಾರಾಂಗ) ಹಾಗೂ ಯೋಜನಾ ಸಹಾಯಕ (ಶೈಕ್ಷಣಿಕ) ಹುದ್ದೆಗಳಿಗೆ ದಿನಾಂಕ: **25.10.2017**ರಂದು ನಡೆದ 'ಆಯ್ಕೆ ಸಮಿತಿ' ಸಭೆಯ ಶಿಫಾರಸ್ಸುಗಳನ್ನು ಸಂಪೂರ್ಣವಾಗಿ ಪರಿಶೀಲಿಸಿತು. ಆಯಾ ಹುದ್ದೆಗಳಿಗೆ ಬೇಕಾಗುವ ಸೇವಾ ಅನುಭವ, ಜ್ಯೇಷ್ಠತೆ ಮತ್ತು ಶೈಕ್ಷಣಿಕ ಅರ್ಹತೆಯನ್ನು ಕ್ರಮಾನುಸಾರವಾಗಿ ಪರಿಗಣಿಸಿ ಆಯ್ಕೆಗೊಂಡಿರುವ ಅಭ್ಯರ್ಥಿಗಳಿಗೆ ಸಭೆಯು ಅನುಮೋದನೆಯನ್ನು ನೀಡಿತು.

| ಕ್ರ.ಸಂ. | ಹುದ್ದೆಯ ಪದನಾಮ | ಆಯ್ಕೆಗೊಂಡ ಅಭ್ಯರ್ಥಿಗಳು | ಮೀಸಲಾತಿ |
|---|---|---|---|
| **01.** | ಸಹಾಯಕ ನಿರ್ದೇಶಕ (ಪ್ರಸಾರಾಂಗ) | ಡಾ. ಮಲ್ಲನಗೌಡ ಎಸ್.<br>S/o. ಬಸವನಗೌಡ ಎಸ್.<br>ಬೊಮ್ಮನಾಳು ಗ್ರಾಮ<br>ಜಾಲಿಹಾಳ ಅಂಚೆ, ಬಳ್ಳಾರಿ – 583117 | ಮೀಸಲುರಹಿತ (ಹೈ–ಕ) |
| **02.** | ಯೋಜನಾ ಸಹಾಯಕ (ಶೈಕ್ಷಣಿಕ) | ಆರ್. ಜಗನ್ನಾಥ ಪೂಜಾರ್<br>S/o. ಆರ್. ಹನುಮೇಶಾಚಾರ್ಯ<br>ಪೂರ್ಣಪ್ರಜ್ಞ ವಿದ್ಯಾಪೀಠ, ಶ್ರೀನಿವಾಸನಗರ<br>ಕತ್ತರಿಗುಪ್ಪೆ ಮುಖ್ಯರಸ್ತೆ, ಬೆಂಗಳೂರು – 560028. | ಸಾಮಾನ್ಯ (ಹೈ–ಕ) |

ಉಳಿದಂತೆ, ಅಧಿಸೂಚನೆಯಲ್ಲಿ ಹೈದರಾಬಾದ್–ಕರ್ನಾಟಕ ಪ್ರದೇಶದವರಿಗಾಗಿ ಮೀಸಲಿರಿಸಿದ ಹುದ್ದೆಗಳ ಪೈಕಿ– ಯೋಜನಾ ಸಹಾಯಕ (ಶೈಕ್ಷಣಿಕ) – **01**(ಹೈ.ಕ.–ಪ.ಜಾ.); ಸಿಸ್ಟಂ ಅನಲಿಸ್ಟ್ – **01**(ಹೈ.ಕ.–ಮೀಸಲುರಹಿತ); ಗ್ರಂಥಾಲಯ ಸಹಾಯಕ – **01**(ಹೈ.ಕ.–ಮೀಸಲುರಹಿತ); ಡಾಟಾ ಎಂಟ್ರಿ ಆಪರೇಟರ್ – **01**(ಹೈ.ಕ.–ಮೀಸಲುರಹಿತ) ಹಾಗೂ ಟೆಲಿಫೋನ್ ಆಪರೇಟರ್ – **01**(ಹೈ.ಕ.–ಮೀಸಲುರಹಿತ) –ಈ ಹುದ್ದೆಗಳಿಗೆ ಸೂಕ್ತ ಅಭ್ಯರ್ಥಿಗಳು ಇಲ್ಲದಿರುವ ಹಿನ್ನೆಲೆಯಲ್ಲಿ ಮತ್ತೊಮ್ಮೆ ಅಧಿಸೂಚನೆಯನ್ನು ಹೊರಡಿಸಿ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಕ್ರಮಕೈಗೊಳ್ಳಬಹುದೆಂದು ಸಭೆಯು ಸೂಚಿಸಿತು. ನೇಮಕಾತಿ ಹೊಂದಿರುವವರು ನೇಮಕಾತಿ ಆದೇಶ ಹೊರಡಿಸಿದ ಒಂದು ವಾರದ ಒಳಗೆ ಕರ್ತವ್ಯಕ್ಕೆ ಹಾಜರಾಗಲು ಸಭೆಯು ಸೂಚಿಸಿತು ಹಾಗೂ ನಡಾವಳಿಯ ವಿಷಯ ಸಂಖ್ಯೆ **02**ರಲ್ಲಿ ತಿಳಿಸಿರುವಂತೆ ಹೈದರಾಬಾದ್–ಕರ್ನಾಟಕ ಪ್ರದೇಶದವರಿಗಾಗಿ ಮೀಸಲಿರಿಸಿರುವ ವಿವಿಧ ಹುದ್ದೆಗಳಿಗೆ ಅಧಿಸೂಚನೆಯನ್ನು ಹೊರಡಿಸಿ ನಿಯಮಾನುಸಾರ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಒಪ್ಪಿಗೆ ಸೂಚಿಸಿತು.

Shilpa

ಶ್ರೀಮತಿ ಎಂ. ಶಿಲ್ಪ, ಕೆ.ಎ.ಎಸ್.
ಸದಸ್ಯ ಕಾರ್ಯದರ್ಶಿ

27.10.17

ಪ್ರೊ. ಪದ್ಮಾಶೇಖರ್
ಅಧ್ಯಕ್ಷರು